ಸಂಪುಟ : 8 ಸಂಚಿಕೆ : 174 ಪುಟ : 4 ಬೆಲೆ : 3.00 ರವಿವಾರ ಆಗಸ್ಟ್ 13, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 174 Pages : 4 Price : 3.00 Sunday August 13, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಗದಗ ಜಿಲ್ಲೆಗೆ ಸಚಿವ ಈಶ್ವರ ಖಂಡ್ರೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಖಾತೆ ಸಚಿವರಾದ ಈಶ್ವರ ಬಿ ಖಂಡ್ರೆ ಅವರು ಆಗಸ್ಟ್ 13 ರ ಗದಗ ಜಿಲ್ಲಾ ಪ್ರವಾಸ ವಿವರ ಇಂತಿದೆ.

ಬೆಳಗ್ಗೆ 5.55 ಗಂಟೆಗೆ ಬೆಂಗಳೂರಿನಿಂದ ವಿಮಾನ ಮೂಲಕ ಹೊರಟು ಹುಬ್ಬಳ್ಳಿಗೆ ಆಗಮಿಸುವರು. ನಂತರ ಅಲ್ಲಿಂದ ರಸ್ತೆ ಮಾರ್ಗವಾಗಿ ಗದುಗಿಗೆ ಬೆಳಿಗ್ಗೆ 8.30 ಗಂಟೆಗೆ ಆಗಮಿಸುವರು.

ಬೆಳಿಗ್ಗೆ 11 ಗಂಟೆಗೆ ಬಿಂಕದಕಟ್ಟೆ ಮೃಗಾಲಯದಲ್ಲಿ ಮಾಜಿ ಸಚಿವರಾದ ಎಸ್ ಎಸ್ ಪಾಟೀಲ ಅವರ 89ನೇ ಹುಟ್ಟುಹಬ್ಬದ ನಿಮಿತ್ತ ಜರುಗುವ ಅರಣ್ಯ ಹಾಗೂ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಇದೇ ಸಂದರ್ಭದಲ್ಲಿ ಪರಿಸರ ಜಾಗೃತಿಗಾಗಿ 100 ಸಸಿಗಳ ದತ್ತಕ ಹಾಗೂ ಮೃಗಾಲಯದ ಪಕ್ಷಿಗಳ ದತ್ತಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.


ನಂತರ ಮಧ್ಯಾಹ್ನ 2 ಗಂಟೆಗೆ ಗದಗನಿಂದ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ಪ್ರಯಾಣ ಬೆಳಸುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ಸಚಿವ ಎಚ್.ಕೆ.ಪಾಟೀಲ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಆಗಸ್ಟ್ 13 ರ ಗದಗ ಪ್ರವಾಸ ವಿವರ ಇಂತಿದೆ.

ಬೆಳಗ್ಗೆ 7.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮಾರ್ಗವಾಗಿ ಗದಗ ಆಗಮಿಸುವರು. ನಂತರ ಬೆಳಿಗ್ಗೆ 11 ಗಂಟೆಗೆ ಬಿಂಕದಕಟ್ಟೆ ಮೃಗಾಲಯದಲ್ಲಿ ಮಾಜಿ ಸಚಿವರಾದ ಎಸ್ ಎಸ್ ಪಾಟೀಲ ಅವರ 89ನೇ ಹುಟ್ಟುಹಬ್ಬದ ನಿಮಿತ್ತ ಜರುಗುವ



ಅರಣ್ಯ ಹಾಗೂ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಶನಿವಾರದಂದು ಸುತ್ತೂರು ಮಠದ ಶ್ರೀಗಳನ್ನು ಭೇಟಿ ಮಾಡಿ ಆಶೀರ್ವಾದ ಪಡೆದು, ಶ್ರೀಗಳ ಕುಶಲೋಪರಿ ವಿಚಾರಿಸಿದರು.

## ಗದಗ ಜಿಲ್ಲಾ ಕಾಂಗ್ರೆಸ್ ವತಿಯಿಂದ ಸ್ವಾತಂತ್ರ್ಯ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆ.15ರ ಮುಂಜಾನೆ 8.30ಕ್ಕೆ 77ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ಗದುಗಿನ ಕಾಟನ್ ಸೇಲ್ ಸೊಸೈಟಿಯ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಧ್ವಜಾರೋಹಣವನ್ನು ರೋಣ ಮತಕ್ಷೇತ್ರದ ಶಾಸಕ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ ಎಸ್ ಪಾಟೀಲ ನೆರವೇರಿಸುವರು.

ಸಚಿವರಾದ ಎಚ್ ಕೆ ಪಾಟೀಲ, ಮಾಜಿ ಶಾಸಕರಾದ ಡಿ ಆರ್ ಪಾಟೀಲ, ಬಿ ಆರ್ ಯಾವಗಲ್, ರಾಮಕೃಷ್ಣ ದೊಡ್ಡಮನಿ, ಜಿ ಎಸ್ ಗಡ್ಡದೇವರಮಠ ಹಾಗೂ ಎಸ್ ಎನ್ ಪಾಟೀಲರವರು ಹಾಜರಾಗುವರು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು-ಪದಾಧಿಕಾರಿಗಳು, ಜಿಲ್ಲಾ ಪಂಚಾಯತ, ತಾಲೂಕು ಪಂಚಾಯತ, ಗ್ರಾಮ ಪಂಚಾಯತ, ಎಪಿಎಂಸಿಯ ಅಧ್ಯಕ್ಷರು-ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್ಸಿ/ಎಸ್ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್



ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೆತ್ ಮಜದೂರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರರ, ಶಿಕ್ಷಕರ ವಿಭಾಗ, ನೀತಿ-ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ,ಲಿಗಲ್ ರೀಫಾರ್ಮ್ಸ್, ಐಟಿ-ಡಾಟಾ ವಿಭಾಗ, ಮಾಧ್ಯಮ ವಿಭಾಗ, ಪಕ್ಷದ ಅಭಿಮಾನಿಗಳು ಕಾರ್ಯಕ್ರಮಕ್ಕೆ ಹಾಜರಾಗಲು ಗದಗ-ಬೆಟಗೇರಿ ಶಹರ ಬ್ಲಾಕ್ ಕಾಂಗ್ರೆಸ ಸಮಿತಿ ಅಧ್ಯಕ್ಷ ಬಿ ಬಿ ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

### ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಹೇಳಿಕೆಯ ವಿಡಿಯೋ ವೈರಲ್/ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತ ದೊಡ್ಡಮನಿ ಖಂಡನೆ

# ಮುಂದೊಂದು ದಿನ ಉತ್ತರ ಕರ್ನಾಟಕ ಪ್ರತ್ಯೇಕ ರಾಜ್ಯವಾಗುತ್ತೆ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಜನರು ಅತ್ಯಂತ ಮುಗ್ಧರು. ಈ ಭಾಗದಲ್ಲಿ ಅಭಿವೃದ್ಧಿಯಲ್ಲಿ ಹಿನ್ನೆಡೆಯಾಗುತ್ತಿದೆ. ಉತ್ತರ ಕರ್ನಾಟಕಕ್ಕೆ ದೊಡ್ಡ ಮಟ್ಟದಲ್ಲಿ ಅನ್ಯಾಯವಾಗುತ್ತಿದೆ. ಯಾವಾಗ ಪ್ರತ್ಯೇಕತೆಗಾಗಿ ಕೂಗು ಪ್ರಾರಂಭವಾಗುತ್ತದೆಯೋ ಗೊತ್ತಿಲ್ಲ. ಆದರೆ, ಮುಂದೊಂದು ದಿನ ಉತ್ತರ ಕರ್ನಾಟಕ ಪ್ರತ್ಯೇಕವಾಗುವುದು ನಿಶ್ಚಿತ. ರಾಜ್ಯದಲ್ಲಿ ಯಾವುದೇ ಪಕ್ಷ ಸರ್ಕಾರ ರಚನೆ ಮಾಡಿದಾಗಲೂ ಹೆಚ್ಚು ಶಾಸಕರನ್ನು ಕೊಡುವುದು ಉತ್ತರ ಕರ್ನಾಟಕವೇ. ಆದ್ದರಿಂದ, ಈ ಭಾಗ ನಿಷ್ಕಾಳಜಿಗೊಳಗಾಗುವುದು ಬೇಡ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ತಮ್ಮ ಭಾಷಣದಲ್ಲಿ ಹೇಳಿದ್ದಾರೆ.

ಮುಂಡರಗಿ ಪಟ್ಟಣದ ಜಗದ್ಗುರು ತೋಂಟದಾರ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡುತ್ತ, ಹೀಗೆ ಹೇಳಿಕೆ ನೀಡಿದ್ದಾರೆ. ದಿ. ಉಮೇಶ್ ಕತ್ತಿ ಅವರ ನಂತರ, ವೇದಿಕೆಯೊಂದರಲ್ಲಿ ಸಾರ್ವಜನಿಕವಾಗಿ ಮತ್ತೊಬ್ಬ ಶಾಸಕರು ಈ ರೀತಿ ಬಹಿರಂಗ ಹೇಳಿಕೆ ನೀಡಿರುವ ವಿಡಿಯೋ ಸಾಮಾಜಿಕ ತಾಣಗಳಲ್ಲಿ ಸದ್ಯ ವೈರಲ್ ಆಗುತ್ತಿದೆ. ಇದರ ಬೆನ್ನಲ್ಲೇ ಶಾಸಕರ ಹೇಳಿಕೆಗೆ ವ್ಯಾಪಕ ಪ್ರತಿಕ್ರಿಯೆಗಳೂ ವ್ಯಕ್ತವಾಗತೊಡಗಿವೆ.

## ರಾಜ್ಯವನ್ನು ಇಬ್ಭಾಗ ಮಾಡುವ ಶಾಸಕರ ಹೇಳಿಕೆ ಖಂಡನೀಯ



ರಾಜ್ಯವನ್ನು ಇಬ್ಭಾಗ ಮಾಡುವ ಶಾಸಕರ ಹೇಳಿಕೆ ಖಂಡನೀಯವಾಗಿದ್ದು, ಅದು ಅವರ ಮನಸ್ಥಿತಿ ಮತ್ತು ಪಕ್ಷದ ಸಿದ್ಧಾಂತವನ್ನು ಬಿಂಬಿಸುವಂತಿದೆ. ಇಂತಹ ಹೇಳಿಕೆ ನೀಡುವ ಮೂಲಕ ರಾಜ್ಯದಲ್ಲಿ ಜನರ ಮತ್ತು ಕನ್ನಡಪರ ಹೋರಾಟಗಾರರ ಶಾಂತಿ ಹಾಗೂ ನೆಮ್ಮದಿ ಕೆದುಕುವ ಪ್ರಯತ್ನ ಮಾಡಿದ್ದು, ತಮ್ಮ ಹೇಳಿಕೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಸುಜಾತಾ ದೊಡ್ಡಮನಿ ಎಚ್ಚರಿಕೆ ನೀಡಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಶುಕ್ರವಾರ ನಗರದ ತೊಂಟ-ದಾರ್ಯ ಪ್ರಥಮದರ್ಜೆ ಕಾಲೇಜಿನ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರು ಮುಂದೊಂದು ದಿನ ಉತ್ತರ ಕರ್ನಾಟಕ ಪ್ರತೇಕ ರಾಜ್ಯವಾಗಲಿದೆ ಎನ್ನುವ ಹೇಳಿಕೆ ನೀಡಿರುವದನ್ನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ಎನ್ ದೊಡ್ಡಮನಿ ತೀವ್ರವಾಗಿ ಖಂಡಿಸಿದ್ದಾರೆ.


ಈ ಕುರಿತು ಶನಿವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, 'ಉದಯವಾಗಲಿ ಚೆಲುವ ಕನ್ನಡ ನಾಡು' ಎಂಬ ಘೋಷಣೆಯ ಮೂಲಕ ಕನ್ನಡ ಭಾಷೆಯನ್ನು ಬಳಸುವ ಪ್ರದೇಶಗಳನ್ನು ಕರ್ನಾಟಕ ಏಕೀಕರಣದ ಮೂಲಕ ಒಂದುಗೂಡಿಸಿದ ಕನ್ನಡ ಕುಲ ಪುರೋಹಿತ, ಆಲೂರು ವೆಂಕಟರಾಯ, ಬಿಎಂಶ್ರೀ, ಅಂದಾನಪ್ಪ ದೊಡ್ಡಮೇಟಿ, ಪಾಪು, ಹುಯಿಲಗೋಳ ನಾರಾಯಣರಾವ್ ಮುಂತಾದ ಎಲ್ಲಾ ಮಹನೀಯರನ್ನು ಸ್ವಾತಂತ್ರ್ಯೋತ್ಸವ ಮತ್ತು ಕರ್ನಾಟಕ ರಾಜ್ಯದ 70ನೇ ವರ್ಷಾಚರಣೆಯಲ್ಲಿ ಸ್ಮರಿಸುವುದು ಪ್ರತಿಯೊಬ್ಬ ಕನ್ನಡಿಗನ ಹೆಮ್ಮೆ ಮತ್ತು ಕರ್ತವ್ಯವಾಗಿದೆ ಎಂದಿದ್ದಾರೆ.

### ಶಿಗ್ಲಿ ಗ್ರಾಮದ ಶಂಕರ ರಾಗಿ ಅವರಿಗೆ ಕೇಂದ್ರ ಗೃಹ ಸಚಿವರ ಪದಕ

# ಪೊಲೀಸ್ ಇಲಾಖೆಯ ಚಾಣಾಕ್ಷ'ರಾಗಿ'

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲಾ ಲೋಕಾಯುಕ್ತ ಡಿವೈಎಸ್‌ಪಿ ಶಂಕರ ಎಂ ರಾಗಿ ಅವರು 2023ರ ಕೇಂದ್ರ ಗೃಹ ಸಚಿವರ 'ತನಿಖಾ ಕೌಶಲ್ಯ ಪದಕ' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ಈ ದಕ್ಷ ಅಧಿಕಾರಿಗೆ ಪ್ರಶಸ್ತಿ ಲಭಿಸಿರುವ ಬಗ್ಗೆ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸರ್ಕಾರದ ಗೃಹ ಇಲಾಖೆಯು ಕರ್ನಾಟಕ ರಾಜ್ಯದ 7 ಪೊಲೀಸ್ ಅಧಿಕಾರಿಗಳು ಸೇರಿದಂತೆ, ವಿವಿಧ ರಾಜ್ಯಗಳ 140 ಪೊಲೀಸ್



ಇಲಾಖೆಯ ಅಧಿಕಾರಿಗಳು ತನಿಖೆಯಲ್ಲಿನ ಶ್ರೇಷ್ಠತೆಗಾಗಿ ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಚಿಕ್ಕೋಡಿ ಡಬಲ್ ಮರ್ಡರ್ ಕೇಸ್ ಬೇಧಿಸಿದ ಚಾಣಾಕ್ಷ: 2013ರಲ್ಲಿ ಚಿಕ್ಕೋಡಿಯಲ್ಲಿ ನಡೆದಿದ್ದ ಡಬಲ್ ಮರ್ಡರ್ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ್ದ ಶಂಕರ್ ರಾಗಿ, ಆರೋಪಿಗಳಿಗೆ ಶಿಕ್ಷೆಯಾಗುವಂತೆ ಮಾಡಿದ್ದರು. ಸದ್ಯ ಗದಗ ಡಿವೈಎಸ್‌ಪಿಯಾಗಿರುವ ಶಂಕರ್ ರಾಗಿ, 2013ರಲ್ಲಿ ಚಿಕ್ಕೋಡಿ ಠಾಣೆಯ ಸಿಪಿಐ ಆಗಿದ್ದರು. ತಾಲೂಕಿನ ಮಮದಾಪುರ ಕೆಕೆ ಗ್ರಾಮದ ಸಂಗೀತಾ ಆಕಳೆ, ಬಸವರಾಜ್ ಬುರ್ಜಿ ಅವರ ಜೋಡಿ ಕೊಲೆಯಾಗಿತ್ತು. ಇದರ ತನಿಖೆ ಕೈಗೆತ್ತಿಕೊಂಡಿದ್ದ ಶಂಕರ್ ರಾಗಿ ಪ್ರಕರಣವನ್ನು ಬೇಧಿಸುವಲ್ಲಿ ಸಫಲರಾಗಿದ್ದರು. ಅನೈತಿಕ ಸಂಬಂಧದ ಶಂಕೆಯಿಂದ ಸಂಗೀತಾಳ ಪತಿ ಬಾಬು ಆಕಳೆ ಎಂಬಾತ ಪತ್ನಿ ಸಂಗೀತಾ ಹಾಗೂ ಬಸವರಾಜ್ ಎಂಬುವರನ್ನ ಕೊಚ್ಚಿ ಕೊಲೆ ಮಾಡಿದ್ದ. ಬಳಿಕ ಇಬ್ಬರ ದೇಹವನ್ನು ಜಾಲಿ ಮುಳ್ಳಿನ ಗಿಡಕ್ಕೆ ಕಟ್ಟಿ ಬೆಂಕಿ ಇಡಲಾಗಿತ್ತು.

ಪ್ರಕರಣ ಬೆಳಗಾವಿಯಾದ್ಯಂತ ಸಂಚಲನ ಮೂಡಿಸಿತ್ತು. ಪ್ರಕರಣ ಬೇಧಿಸಿದ ಶಂಕರ ರಾಗಿ ಅವರು ಬಾಬು ಆಕಳೆ, ನಾಗಪ್ಪ ಆಕಳೆ, ಮುತ್ತಪ್ಪ ಆಕಳೆ ಅವರನ್ನು ಬಂಧಿಸಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ್ದರು. ಜೋಡಿ ಕೊಲೆ ಪ್ರಕರಣದ ವಿಚಾರಣೆ ನಡೆದು, ಮೂವರು ಆರೋಪಿಗಳಿಗೆ ಚಿಕ್ಕೋಡಿಯ 7ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 2022ರಲ್ಲಿ ಗಲ್ಲು ಶಿಕ್ಷೆ ವಿಧಿಸಿ ತೀರ್ಪು ನೀಡಿತು.

ಅಪರಾಧ ತನಿಖೆಯ ಉನ್ನತ ವೃತ್ತಿಪರ ಮಾನದಂಡಗಳನ್ನು ಉತ್ತೇಜಿಸುವ ಮತ್ತು ತನಿಖೆಯಲ್ಲಿನ ಶ್ರೇಷ್ಠತೆಯನ್ನು ಗುರುತಿಸುವ ಉದ್ದೇಶದಿಂದ 2018ರಲ್ಲಿ ಈ ಪ್ರಶಸ್ತಿ ಪ್ರಾರಂಭಿಸಲಾಗಿದೆ. ಪ್ರತಿ ವರ್ಷ ಆಗಸ್ಟ್ 12ಕ್ಕೆ ಈ ಪ್ರಶಸ್ತಿಯನ್ನು ಘೋಷಿಸಲಾಗುತ್ತದೆ. ಶಿಗ್ಲಿ ಗ್ರಾಮದ ಶಂಕರ ರಾಗಿ ಅವರು ಗುಲಬರ್ಗಾ, ಶಹಪೂರ, ಚಿಕ್ಕೋಡಿ, ಗದಗ ಜಿಲ್ಲೆಯಲ್ಲಿ ಸಲ್ಲಿಸಿದ ಪ್ರಾಮಾಣಿಕ ಸೇವೆ ಸಲ್ಲಿಸಿದ್ದು, ದಕ್ಷ ಆಡಳಿತದಿಂದ ಇವರಿಗೆ ಮುಖ್ಯಮಂತ್ರಿಗಳ ಪದಕ, ಕಳೆದ ವರ್ಷ ರಾಷ್ಟ್ರಪತಿ ಪ್ರಶಸ್ತಿಯೂ ಲಭಿಸಿದೆ.

### 'ನನ್ನ ಮಣ್ಣು ನನ್ನ ದೇಶ' ಅಭಿಯಾನಕ್ಕೆ ಚಾಲನೆ ನೀಡಿದ ನಗರಸಭಾಧ್ಯಕ್ಷೆ ಉಷಾ ದಾಸರ

## 'ದೇಶಭಕ್ತ ವೀರರಿಗೆ ಗೌರವ ಸಮರ್ಪಣೆ'

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಅಭಿಯಾನವು ದೇಶಾದ್ಯಂತ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ದೇಶಕ್ಕಾಗಿ ತ್ಯಾಗ ಮಾಡಿದ ವೀರರಿಗೆ ಗೌರವ ಸಲ್ಲಿಸುವ ಆಶಯ ಹೊಂದಿದೆ. ಇದು ಭಾರತದ ಮಣ್ಣು ಮತ್ತು ಅದರ ವೀರತ್ವದ ಏಕೀಕೃತ ಆಚರಣೆಯನ್ನು ಕಲ್ಪಿಸುವುದರೊಂದಿಗೆ ರಾಷ್ಟ್ರದ ಸ್ವಾತಂತ್ರ್ಯ ಮತ್ತು ಪ್ರಗತಿಯ ಪ್ರಯಾಣವನ್ನು ನೆನಪಿಸುತ್ತದೆ. ಪ್ರತಿಯೊಬ್ಬರ ಮನದಲ್ಲೂ ರಾಷ್ಟ್ರೀಯ



ಹೆಮ್ಮೆಯ ಭಾವನನ್ನು ಮೂಡಿಸುತ್ತದೆ ಎಂದು ನಗರಸಭಾಧ್ಯಕ್ಷೆ ಉಷಾ ದಾಸರ ಹೇಳಿದರು.

ಕೇಂದ್ರ ಸರ್ಕಾರ ಆಗಸ್ಟ್ 9ರಿಂದ ಆ.30ರವರೆಗೆ ಮೂರು ಹಂತಗಳಲ್ಲಿ 'ನನ್ನ ಮಣ್ಣು ನನ್ನ ದೇಶ' ಅಭಿಯಾನಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ, ಗದಗ-ಬೆಟಗೇರಿಯ ನಗರಸಭೆಯ ಉದ್ಯಾನವನದಲ್ಲಿ ಶ ನಿ ವಾ ರ ▶▶ 3ನೇ ಪುಟಕ್ಕೆ

### ನರೇಗಲ್ ನಾಗರಿಕರ ಮನವಿ

## ಸಂತೆ ಮಾರುಕಟ್ಟೆ ಸ್ಥಳಾಂತರ ಸೂಕ್ತವಲ್ಲ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರತಿ ಸೋಮವಾರ ಪಟ್ಟಣದಲ್ಲಿ ಈಗ ನಡೆಯುತ್ತಿರುವ ಸ್ಥಳದಲ್ಲಿಯೇ ತರಕಾರಿ ಸಂತೆಯನ್ನು ನಡೆಸಬೇಕು ಎಂದು ಆಗ್ರಹಿಸಿ ಸಾರ್ವಜನಿಕರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಹಾಗೂ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಿದರು.

ಪಟ್ಟಣ ಪಂಚಾಯತಿ ಮಾಜಿ ಅಧ್ಯಕ್ಷ ಕಲ್ಮೇಶ ತೊಂಡಿಹಾಳ ಮತ್ತು ಸಾರ್ವಜನಿಕರು ಮನವಿ ಸಲ್ಲಿಸಿ, ತರಕಾರಿ ಸಂತೆಯು ದಶಕಗಳಿಂದ



ಪಟ್ಟಣದ ಹೃದಯ ಭಾಗವಾದ ಶ್ರೀ ವಿನಾಯಕ ದೇವಾಲಯದ ಹತ್ತಿರ ಸಾರ್ವಜನಿಕರಿಗಾಗಲಿ, ವ್ಯಾಪಾರಿಗಳಿಗಾಗಲಿ ಯಾವುದೇ ರೀತಿಯ ತೊಂದರೆಯಾಗದೆ ಸುರಕ್ಷಿತವಾಗಿ ನಡೆಯುತ್ತಿದೆ. ಆದರೆ ತಾವು ಸಾರ್ವಜನಿಕರ ಅಭಿ ಪ್ರಾ ಯ ▶▶ 3ನೇ ಪುಟಕ್ಕೆ

### ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪ ಪೂ ಕಾಲೇಜು ಸಂಸತ್ ಉದ್ಘಾಟಿಸಿದ ಕೃಷ್ಣಗೌಡ ಪಾಟೀಲ

# ಓದಿನ ಕಡೆಗೆ ಹೆಚ್ಚಿನ ಶ್ರದ್ಧೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಗಮನ ಕೊಡಬೇಕು. ಈಗಿನ ತಾಂತ್ರಿಕ, ಸ್ಪರ್ಧಾತ್ಮಕ ಯುಗದಲ್ಲಿ ಓದಿನ ಕಡೆಗೆ ಹೆಚ್ಚಿನ ಶ್ರದ್ಧೆ ವಹಿಸಿದಲ್ಲಿ, ನಾವು ನಮ್ಮ ಗುರಿ ತಲುಪುವಲ್ಲಿ ಯಶಸ್ವಿಯಾಗಬಹುದು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್ ಪಾಟೀಲ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪದವಿಪೂರ್ವ



ಮಹಾವಿದ್ಯಾಲಯದಲ್ಲಿ 2023-24ನೇ ಸಾಲಿನ ಸಾಂಸ್ಕೃತಿಕ ಚಟುವಟಿಕೆ, ಕಾಲೇಜು ಸಂಸತ್ ಉದ್ಘಾಟನೆ ಮತ್ತು ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ ಎನ್ ಕುರ್ತಕೋಟಿ, ಸಂಸ್ಥೆಯ ಗೌರವ ಕಾರ್ಯದರ್ಶಿ ಎಂ ಎಲ್ ಪೋತ್ನಿಸ ಉಪಸ್ಥಿತರಿದ್ದರು. ಪ್ರತಿಜ್ಞಾ ವಿಧಿಯನ್ನು ವಾಯ್ ಎಸ್ ಹುನಗುಂದ ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾಗಿ ಆಗಮಿಸಿದ ಜಿ ಎನ್ ಕುರ್ತಕೋಟಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಾಂಸ್ಕೃತಿಕ ವಿಭಾಗದ ಸಂಯೋಜಕ ಆರ್ ಎಸ್ ಹೆಬಸೂರ ಕಾರ್ಯಕ್ರಮ ನಿರೂಪಿಸಿದರು. ಆರ್ ಡಿ ▶▶ 3ನೇ ಪುಟಕ್ಕೆ

ನಮ್ಮ ಕಾಲೇಜಿನ 2022-23ನೇ ಸಾಲಿನ ಹಲವಾರು ವಿದ್ಯಾರ್ಥಿಗಳು ಕಲೆ, ವಿಜ್ಞಾನ, ವಾಣಿಜ್ಯ ವಿಭಾಗಗಳಲ್ಲಿ ಶೇ.100ರಷ್ಟು ಫಲಿತಾಂಶ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸ ಇನ್ನೂ ಉನ್ನತ ಮಟ್ಟದಲ್ಲಿ ನಡೆದು, ಜೀವನದಲ್ಲಿ ಯಶಸ್ಸು ಸಾಧಿಸಿ, ಈ ಕಾಲೇಜಿನ ಕೀರ್ತಿಯು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಪಸರಿಸುವಂತಾಗಲಿ.

**– ಡಿ ಜಿ ಜೋಗಣ್ಣವರ.**

ಹುಸಶಿ ಸಂಸ್ಥೆಯ ಪ ಪೂ ಕಾಲೇಜಿನ ಪ್ರಾಚಾರ್ಯರು.

## ಸಾಕ್ಷಿ ಸುಭಾಷಿತ

ಅಧಿಕಾರದಲ್ಲಿರುವಂಥ ವ್ಯಕ್ತಿಯು ಹಒಗಳುಭಟ್ಟರನ್ನು ದೂರವಿಟ್ಟು ಟೀಕಿಸುವವರನ್ನು ಸ್ವಾಗತಸಬೇಕು

–ಬುದ್ಧಿಮಾತು

## ಸಂಪಾದಕೀಯ

# ಸುಳ್ಳು ಸುದ್ದಿ ಕಡಿವಾಣಕ್ಕೆ ಕಾನೂನು

ಕೇಂದ್ರ ಗೃಹ ಸಚಿವ ಅಮಿತ್ ಶಾ ಲೋಕಸಭೆಯಲ್ಲಿ ಶುಕ್ರವಾರ ಹಲವಾರು ಮಸೂದೆಗಳನ್ನು ಮಂಡಿಸಿದ್ದಾರೆ. ಮುಖ್ಯವಾಗಿ ಬ್ರಿಟಿಷರ ಕಾಲದ ದಂಡ ಸಂಹಿತೆ ಬದಲಾವಣೆ, ಅತ್ಯಾಚಾರಿಗೆ ಗಲ್ಲು ಶಿಕ್ಷೆ, ಸಾಮೂಹಿಕ ಅತ್ಯಾಚಾರಿಗಳಿಗೆ ಗರಿಷ್ಠ ಜೈಲು ಶಿಕ್ಷೆ ನೀಡುವಂತಹ ಕಾನೂನು ರೂಪಿಸಿದ್ದಾರೆ.

ಅತ್ಯಾಚಾರಿಗಳಿಗೆ ಗರಿಷ್ಠ ಶಿಕ್ಷೆ ವಿಧಿಸುವ ಕಾನೂನು ಅತ್ಯಂತ ಸ್ವಾಗತಾರ್ಹವಾಗಿದೆ. ಸಾಮೂಹಿಕ ಅತ್ಯಾಚಾರಿಗಳಿಗೂ ಸಾಮೂಹಿಕ ಮರಣದಂಡನೆ ಕೊಡುವಂತಹ ಕಾನೂನು ರೂಪಿಸುವ ಅವಕಾಶವಿತ್ತು. ಆದರೂ ಗರಿಷ್ಠ ಶಿಕ್ಷೆ ವಿಧಿಸುವ ಮುಸೂದೆ ಮಂಡನೆಯಾಗಿರುವುದು ಒಳ್ಳೆಯದೆ.

ಅದರ ಜೊತೆಗೆ ಸುಳ್ಳು ಸುದ್ದಿ ಹರಡುವವರೆಗೆ 3 ವರ್ಷ ಕಠಿಣ ಶಿಕ್ಷೆ ವಿಧಿಸುವ ತೀರ್ಮಾನ ಕೈಗೊಂಡಿರುವುದು ಇಂದಿನ ಅನಿವಾರ್ಯ ಮತ್ತು ಅಗತ್ಯವಾಗಿದೆ. ಮಾಹಿತಿ ತಂತ್ರಜ್ಞಾನದ ಈ ಯುಗದಲ್ಲಿ ಸುಳ್ಳು ಸುದ್ದಿ ಅತ್ಯಂತ ವೇಗವಾಗಿ ಹರಡುತ್ತಿದೆ. ಅದರಲ್ಲೂ ಸಾಮಾಜಿಕ ಜಾಲತಾಣದ ಮೂಲಕ ಸಮಾಜದ ಸ್ವಾಸ್ಥ್ಯ ಹಾಳು ಮಾಡುವಂತಹ ಸುದ್ದಿಗಳು ಸಾಕಷ್ಟು ಹರಿದಾಡುತ್ತಿವೆ.

ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅಮಿತ್ ಶಾ ಮಹತ್ವದ ಮಸೂದೆ ಮಂಡಿಸಿದ್ದಾರೆ. ಸೆಕ್ಷನ್ 195 (1) ಡಿ ಹೇಳುವಂತೆ 'ಭಾರತದ ಸಾರ್ವಭೌಮತ್ವ ಏಕತೆ ಮತ್ತು ಸಮಗ್ರತೆ ಧಕ್ಕೆ ತರುವ ಸುಳ್ಳು ಅಥವಾ ದಾರಿ ತಪ್ಪಿಸುವ ಮಾಹಿತಿಯನ್ನು ಹರಡುವುದು ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ದಂಡ ಅಥವಾ ಎರಡನ್ನು ವಿಧಿಸಬಹುದಾಗಿದೆ.'

ಸುಳ್ಳು ಸುದ್ದಿಗಳಿಂದಾಗಿ ಮಾಧ್ಯಮಗಳ ಮೇಲಿನ ವಿಶ್ವಾಸಾರ್ಹತೆ ಕಡಿಮೆಯಾಗುತ್ತಿದೆ. ಸಾಮಾಜಿಕ ಮಾಧ್ಯಮ ಪ್ರಬಲಗೊಂಡಷ್ಟು ಸುಳ್ಳು ಸುದ್ದಿಗಳ ಹರಡುವಿಕೆಯೂ ಹೆಚ್ಚಾಗುತ್ತಿದೆ. ಸಾಂಪ್ರದಾಯಿಕ ಮಧ್ಯಮಗಳ ಮೇಲೂ ಇದರ ಪರಿಣಾಮ ಕಾಣಬಹುದಾಗಿದೆ.ಹೀಗಾಗಿ ಸುಳ್ಳು ಸುದ್ದಿ ಪತ್ತೆಗೆ ತಂತ್ರಜ್ಞಾನದ ನೆರವು ಪಡೆಯಬೇಕು. ವಿಶೇಷ ನ್ಯಾಯಾಲಯಗಳು ಸ್ಥಾಪನೆಯಾಗಬೇಕು. ಇಲ್ಲವೇ ಅತ್ಯಂತ ವೇಗವಾಗಿ ವಿಚಾರಣೆ ನಡೆಯುವಂತಹ ಫಾಸ್ಟ್ ಟ್ರ್ಯಾಕ್ ಮೋಡ್‌ನಲ್ಲಿ ಪ್ರಕರಣದ ವಿಚಾರಣೆ ನಡೆದು, ಶಿಕ್ಷೆ ವಿಧಿಸುವಂತಾದರೆ ಮಾತ್ರ ಸುಳ್ಳು ಸುದ್ದಿಗಳನ್ನು ನಿಯಂತ್ರಿಸಲು ಸಾಧ್ಯ.

### ಕಪ್ಪತ್ತಗುಡ್ಡದ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಲು ಮುಖ್ಯಮಂತ್ರಿಗಳಿಗೆ ಬಸವರಾಜ ಹೊರಟ್ಟಿ ಪತ್ರ

# ಉತ್ತರ ಕರ್ನಾಟಕದ ಸಹ್ಯಾದ್ರಿಯ ರಕ್ಷಣೆಗೆ ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಪ್ರಖ್ಯಾತಿ ಪಡೆದಿರುವ ಗದಗ ಜಿಲ್ಲೆಯ ಕಪ್ಪತ್ತಗುಡ್ಡ ಈ ಭಾಗದ ಕಾಮಧೇನು. ಗದಗ ಜಿಲ್ಲೆಯ ಗದಗ, ಮುಂಡರಗಿ ಮತ್ತು ಶಿರಹಟ್ಟಿ ತಾಲೂಕುಗಳಲ್ಲಿ ಹಬ್ಬಿರುವ ಕಪ್ಪತ್ತಗುಡ್ಡವನ್ನು 2017ರಲ್ಲಿ ವನ್ಯಜೀವಿ ಧಾಮ ಎಂದು ಘೋಷಿಸಿದ್ದು, ಉತ್ತರ ಕರ್ನಾಟಕದ ಪರಿಸರ ಪ್ರಿಯರಿಗೆ ಸಂತಸದ ವಿಚಾರ. ಕಪ್ಪತ್ತಗುಡ್ಡ ಈ ಭಾಗದ ಚಿನ್ನದ ಗುಡ್ಡ ಎಂದೂ ಪ್ರಸಿದ್ಧಿಯಾಗಿದೆ. ಆದರೆ ಈ ಗುಡ್ಡಕ್ಕೆ ಬೇಸಿಗೆಯಲ್ಲಿ ಬೆಂಕಿಯ ಕಾಟವಾದರೆ, ಮಳೆಗಾಲದಲ್ಲಿ ಸಮೃದ್ಧವಾಗಿ ಬೆಳೆದ ಹಸಿರುಗುಡ್ಡಕ್ಕೆ ಪ್ರವಾಸಿಗರಿಂದ ಮತ್ತೊಂದು ರೀತಿಯ ತೊಂದರೆಯಾಗುತ್ತಿದೆ.

ಆಗಾಗ ಗಣಿ ಧಣಿಗಳ ಕೆಟ್ಟ ಕಣ್ಣು ಸಹ ಈ ಗುಡ್ಡದ ಮೇಲೆ ಇರುವುದರಿಂದ, ಮುಖ್ಯಮಂತ್ರಿಗಳು ಅಮೂಲ್ಯವಾದ ಕಪ್ಪತ್ತಗುಡ್ಡವನ್ನು ಸಂರಕ್ಷಿಸಲು ಮುಂದಾಗಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ಪತ್ರ ಬರೆದು ಒತ್ತಾಯಿಸಿದ್ದಾರೆ.

ಕಪ್ಪತ್ತಗುಡ್ಡಕ್ಕೆ ಈಗ ಮತ್ತೆ ಆಪತ್ತು ಬಂದಿದೆ. ಈ ಕುತ್ತಿನಿಂದ ಪಾರು ಮಾಡಲು ರಾಜ್ಯ ಸರ್ಕಾರ ವಿಶೇಷ ಕಾರ್ಯಪಡೆ ರಚಿಸಿ ಪರಿಸರಕ್ಕೆ ದಕ್ಕೆಯಾಗದಂತೆ ಸಂರಕ್ಷಿಸಿ ಕಪ್ಪತ್ತಗುಡ್ಡ ಉಳಿಸಲು ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಸುದೀರ್ಘವಾಗಿ ವಿವರಿಸಿದ ಹೊರಟ್ಟಿಯವರು, ಕಪ್ಪತ್ತಗುಡ್ಡ ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಹೆಸರುವಾಸಿಯಾಗಿದೆ. ಇಲ್ಲಿ ಗಾಳಿ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಖನಿಜ ಸಂಪತ್ತು ಇದೆ. ಇಲ್ಲಿ ಹುಲುಸಾಗಿ ಬೆಳೆದಿರುವ ಸಸ್ಯಗಳಲ್ಲಿ ಔಷಧೀಯ ಗುಣವಿದೆ. ಈ ದಿಶೆಯಲ್ಲಿ ಸಸ್ಯಗಳನ್ನು ಬೆಳೆಸಿ ಪೋಷಣೆ ಮಾಡಿದರೆ ಉತ್ತರ ಕರ್ನಾಟಕದ ಎಲ್ಲಾ ಕಡೆ ಉತ್ತಮ ಮಳೆಯಾಗುತ್ತದೆ ಅನ್ನುವ ಮನೋಭಾವನೆ ಜನರಲ್ಲಿ ಮನೆಮಾಡಿದೆ.



ಕಪ್ಪತ್ತಗುಡ್ಡವನ್ನು ಪಶ್ಚಿಮ ಘಟ್ಟಗಳ ಸೆರಗು ಎನ್ನುಲಾಗುತ್ತಿದೆ. ಪಶ್ಚಿಮ ಘಟ್ಟಗಳನ್ನು ಸಂರಕ್ಷಿಸುವ ರೀತಿಯಲ್ಲಿ ಕಪ್ಪತ್ತಗುಡ್ಡವನ್ನು ಸಹ ಸಂರಕ್ಷಿಸುವ ಕೆಲಸವಾಗಬೇಕು. ಕಪ್ಪತ್ತಗುಡ್ಡದ ಅರಣ್ಯ ಸಂಪತ್ತನ್ನು ಹೆಚ್ಚಿಸುವ ನಿಟ್ಟಿನಲ್ಲಿ ಬೀಜ ಊರುವ ಕಾರ್ಯಕ್ರಮ ಮತ್ತು ಸಂರಕ್ಷಣಾ ಸಸಿಗಳನ್ನು ನೆಡುವ ಕಾರ್ಯಕ್ರಮಗಳನ್ನು ಕರ್ನಾಟಕ ಸರ್ಕಾರ ಹಾಕಿಕೊಳ್ಳಬೇಕು. ಅಮೂಲ್ಯ ಸಸ್ಯ ಸಂಪತ್ತನ್ನು ಮುಂದಿನ ಪೀಳಿಗೆಗೆ ಉಳಿಸುವ ದೊಡ್ಡ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ.

ಇಂತಹ ಕಪ್ಪತ್ತಗುಡ್ಡಕ್ಕೆ ಕಳ್ಳ ಕಾಕರು ಹಾಗೂ ಗಣಿ ಮಾಫಿಯಾದವರ ಕಾಕದೃಷ್ಟಿ ಬಿದ್ದಿದೆ. ಇದಕ್ಕೆ ಕಡಿವಾಣ ಹಾಕುವ ಅವಶ್ಯಕತೆ ಇದೆ. ಕಾಡಿದ್ದರೆ ನಾಡು, ಕಾಡು ಕಡಿದರೆ ನಾಡಿಗೆ ಆಪತ್ತು ಎಂದು ಗೊತ್ತಿದ್ದರೂ ಕೆಲ ದುಷ್ಟ ಜನರು ಸ್ವಹಿತಾಸಕ್ತಿಗಾಗಿ ಏನನ್ನಾದರೂ ಮಾಡಲು ಸಿದ್ಧರಿರುತ್ತಾರೆ. ನೈಸರ್ಗಿಕ ಸಂಪತ್ತು ನಮ್ಮ ಮುಂದಿನ ಪೀಳಿಗೆಗೆ ಬೇಕು. ನೈಸರ್ಗಿಕ ಸಂಪತ್ತನ್ನು ಒಮ್ಮೆ ಹಾಳು ಮಾಡಿದರೆ, ಪುನಃ ಪಡೆಯುವುದು ಕಷ್ಟ ಎಂದರಿತು ಇತರ ದೇಶಗಳಲ್ಲಿ ನೈಸರ್ಗಿಕ ಸಂಪತ್ತು ಸಂರಕ್ಷಣೆಗೆ ವಿಶೇಷ ಆಸಕ್ತಿ ವಹಿಸುತ್ತಾರೆ.

ಸರ್ಕಾರವು ಕಪ್ಪತ್ತಗುಡ್ಡವನ್ನು ವನ್ಯಜೀವಿಧಾಮವೆಂದು ಘೋಷಿಸಿ 2019ರಲ್ಲಿ ಅಧಿಸೂಚನೆ ಹೊರಡಿಸಿತ್ತು.

ಸರ್ಕಾರದ ಘೋಷಣೆ ಹಾಗೂ ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ವನ್ಯಜೀವಿಧಾಮದ ಹತ್ತು ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ನಡೆಸುವುದಕ್ಕೆ ಅವಕಾಶವಿಲ್ಲ. 10 ಕಿಮೀ ಒಳಗಿನ ಜಾಗವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದೇ ಅರ್ಥೈಸಲಾಗಿದೆ. ವಸ್ತುಸ್ಥಿತಿ ಹೀಗಿದ್ದರೂ, ಪರಿಸರ ಸೂಕ್ಷ್ಮ ಪ್ರದೇಶದ ವ್ಯಾಪ್ತಿಯನ್ನು 1 ಕಿಮೀಗೆ ಮಿತಗೊಳಿಸಲು ರಾಜ್ಯಸರ್ಕಾರ ಕೈಗೊಂಡ ತೀರ್ಮಾನದಿಂದ ಸುಪ್ರೀಂಕೋರ್ಟ್ ಆದೇಶಕ್ಕೆ ವ್ಯತಿರಿಕ್ತವಾಗಿ ನಡೆದುಕೊಂಡಂತಾಗುತ್ತದೆ. ಅಲ್ಲದೇ ಪರಿಸರದ ಮೇಲಾಗುವ ಪರಿಣಾಮಗಳನ್ನು ಕಡೆಗಣಿಸಿದಂತಾಗುತ್ತದೆ.


ನಾಡಿನ ಸಂಪನ್ಮೂಲವಾದ ಕಪ್ಪತ್ತಗಿರಿಯ ಸಂರಕ್ಷಣೆಗೆ ಸರಕಾರ ಕಠಿಣ ಕ್ರಮ ಕೈಗೊಳ್ಳುವ ಮೂಲಕ ರಕ್ಷಿಸಬೇಕಾಗಿದೆ. ಇಲ್ಲಿಗೆ ಬರುವ ಪ್ರವಾಸಿಗರಿಗೆ ಕಟ್ಟುನಿಟ್ಟಿನ ನಿಯಮವನ್ನು ಹಾಕಿ, ಪ್ಲಾಸ್ಟಿಕ್ ಇತ್ಯಾದಿ ಪರಿಸರಕ್ಕೆ ಮಾರಕಾಗುವ ವಸ್ತುಗಳನ್ನು ಎಲ್ಲೆಂದರಲ್ಲಿ ಬೀಸಾಡದಂತೆ ಕ್ರಮ ವಹಿಸಬೇಕು. ಕಪ್ಪತ್ತಗುಡ್ಡಕ್ಕೆ ಯಾವುದೇ ಧಕ್ಕೆ ಬರದಂತೆ ಎಚ್ಚರವಹಿಸಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ತಮ್ಮ ಪತ್ರದಲ್ಲಿ ಒತ್ತಾಯಿಸಿದ್ದಾರೆ. ಅಲ್ಲದೆ ಮುಂದಿನ ಪೀಳಿಗೆಗೆ ಇಂತಹ ನಿಸರ್ಗ ಸಂಪತ್ತನ್ನು ಉಳಿಸಿಕೊಳ್ಳುವ ಹೊಣೆಗಾರಿಕೆ ಸಹ ನಮ್ಮ ನಿಮ್ಮೆಲ್ಲರದ್ದಾಗಿದೆ ಎಂದು ಹೊರಟ್ಟಿಯವರು ಮುಖ್ಯಮಂತ್ರಿಗಳಲ್ಲಿ ಕೋರಿದ್ದಾರೆಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

# ಬಸವದಳದ 'ಶರಣ ಸಂಗಮ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ರವಿವಾರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1554ನೇ ಶರಣ ಸಂಗಮದಲ್ಲಿ ಬಸವಾದಿ ಶಿವಶರಣರ 'ವಚನ ತತ್ವಾನುಭವ' ಹಾಗೂ ಸ್ವಾತಂತ್ರ್ಯೋತ್ಸವದ ನೆನಪುಗಳ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ ಕೆ ಕರೇಗೌಡ್ರ ವಹಿಸುವರು. ಬಸವದಳದ ಚಿಂತಕ, ಶರಣ ಎಂ ಆರ್ ಜಿನಗಾ, ಚಿಂತಕರು ವಚನ ಚಿಂತನೆಯನ್ನು ಮಾಡುವರು. ಅಂಬಿಗ ಚೌಡಯ್ಯ ಪ್ರತಿಷ್ಠಾನದ ಅಧ್ಯಕ್ಷ ಶರಣ ಎಸ್ ಎಂ ಹಾದಿಮನಿ ಇವರು ಉಪನ್ಯಾಸ ಮಾಡುವರು.



ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.



ಲಕ್ಷ್ಮೇಶ್ವರದ ಶ್ರೀ ಅಂಭಾ ಭವಾನಿ ದೇವಸ್ಥಾನದಲ್ಲಿ ಅಧಿಕ ಶ್ರಾವಣ ಶುಕ್ರವಾರದ ನಿಮಿತ್ತ ದೇವಿ ಮೂರ್ತಿಗೆ ವಿಶೇಷ ಹೂವಿನ ಅಲಂಕಾರ ನೆರವೇರಿಸಿ, 101 ಮುತ್ತೈದೆಯರಿಗೆ ಉಡಿ ತುಂಬುವ, ಕುಂಕುಮಾರ್ಚನೆ ಪೂಜೆ ನೆರವೇರಿಸಲಾಯಿತು.

# ತ್ರಿವರ್ಣ ಧ್ವಜದಂತೆಯೇ ಉತ್ತುಂಗಕ್ಕೇರಿದ ಹುಬ್ಬಳ್ಳಿಯ ರಾಷ್ಟ್ರಧ್ವಜ ತಯಾರಿಕಾ ಘಟಕ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯಲ್ಲಿರುವ ದೇಶದ ಏಕೈಕ ಬಿಐಎಸ್ ಪ್ರಮಾಣೀಕೃತ ರಾಷ್ಟ್ರಧ್ವಜ ತಯಾರಿಕಾ ಘಟಕ ಈ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ವೇಳೆಗೆ 1.75 ಕೋಟಿ ರೂಪಾಯಿಗಳಷ್ಟು ವಹಿವಾಟು ನಡೆಸುವ ಗುರಿ ಹೊಂದಿದೆ.



ಕಳೆದ ವರ್ಷ ಸ್ವಾತಂತ್ರ್ಯದ 75 ವರ್ಷಗಳ ಸಂದರ್ಭದಲ್ಲಿ ಕೇಂದ್ರ ಸರ್ಕಾರವು 'ಹರ್ ಘರ್ ತಿರಂಗ' ಅಭಿಯಾನವನ್ನು ಘೋಷಿಸಿದ ಬಳಿಕ ಇದು ಸತತ ಎರಡನೇ ವರ್ಷ 1.5 ಕೋಟಿ ರೂಪಾಯಿಗಿಂತಲೂ ಹೆಚ್ಚು ಗಳಿಕೆ ಮಾಡುತ್ತಿದೆ. ಹುಬ್ಬಳ್ಳಿಯ ಬೆಂಗೇರಿಯಲ್ಲಿರುವ ಖಾದಿ ಉತ್ಪನ್ನ ಮತ್ತು ರಾಷ್ಟ್ರಧ್ವಜ ತಯಾರಿಕಾ ಘಟಕದ ನಿರ್ವಹಣೆ ಮಾಡುತ್ತಿರುವ ಕರ್ನಾಟಕ ಖಾದಿ ಗ್ರಾಮೋದ್ಯೋಗ ಸಂಯುಕ್ತ ಸಂಘದ ಪದಾಧಿಕಾರಿಗಳು, ಘಟಕವು ಏಪ್ರಿಲ್ 2023 ರಿಂದ ಜುಲೈ 2023 ರ ನಡುವೆ 1.10 ಕೋಟಿ ರೂಪಾಯಿ ಮೌಲ್ಯದ ವಿವಿಧ ಗಾತ್ರದ ಧ್ವಜಗಳನ್ನು ಮಾರಾಟ ಮಾಡಿದೆ ಎಂದು ಹೇಳುತ್ತಾರೆ.

"ಹರ್ ಘರ್ ತಿರಂಗಾ ಅಭಿಯಾನದಿಂದ ಕಳೆದ ಎರಡು ವರ್ಷಗಳಲ್ಲಿ ನಮ್ಮ ವ್ಯಾಪಾರ ಸುಧಾರಿಸಿದೆ. ಗಣರಾಜ್ಯೋತ್ಸವ ಮತ್ತು ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಹುಬ್ಬಳ್ಳಿ ಘಟಕಕ್ಕೆ ದೇಶದ ನಾನಾ ಭಾಗಗಳಿಂದ ಆರ್ಡರ್‌ಗಳು ಬರುತ್ತವೆ. ಭಾರತದ ಪ್ರಮುಖ ಕಟ್ಟಡಗಳಾದ ರಾಷ್ಟ್ರಪತಿ ಭವನ, ಕೆಂಪು ಕೋಟೆ ಮತ್ತು ಸಂಸತ್ತಿನ ಮೇಲೆ ಹಾರುವ ತ್ರಿವರ್ಣ ಧ್ವಜ ಹುಬ್ಬಳ್ಳಿಯಲ್ಲಿ ತಯಾರಾಗುತ್ತವೆ. ಪ್ರಪಂಚದಾದ್ಯಂತದ ಭಾರತೀಯ ರಾಯಭಾರ ಕಚೇರಿಗಳಲ್ಲಿ ನಮ್ಮಲ್ಲಿ ತಯಾರಾದ ರಾಷ್ಟ್ರೀಯ ಧ್ವಜವನ್ನು ಹಾರಿಸಲಾಗುತ್ತದೆ ಎಂದು ಖಾದಿ ಫೆಡರೇಶನ್‌ನ ಅಧಿಕಾರಿಯೊಬ್ಬರು ಹೇಳುತ್ತಾರೆ. ಹುಬ್ಬಳ್ಳಿ ಘಟಕದಲ್ಲಿ ವರ್ಷವಿಡೀ ವಿವಿಧ ಗಾತ್ರದ ಧ್ವಜಗಳನ್ನು ಸಿದ್ಧಪಡಿಸಲಾಗುತ್ತದೆಯಂತೆ.

ಬೆಂಗೇರಿ ಖಾದಿ ಘಟಕದಲ್ಲಿ ರಾಷ್ಟ್ರಧ್ವಜಕ್ಕೆ ಹೊಲಿಗೆ, ಇಸ್ತ್ರಿ ಮತ್ತು ಪ್ಯಾಕಿಂಗ್ ಮಾಡುವ ಕೆಲಸ ಮಾಡುವ ಮಹಿಳಾ ಕಾರ್ಮಿಕರನ್ನು ಹೊಂದಿದೆ. ರಾಷ್ಟ್ರೀಯ ಹಬ್ಬದ ಸಂದರ್ಭದಲ್ಲಿ ಬೇಡಿಕೆಗಳು ಮತ್ತು ಮಾರಾಟಗಳು ಹೆಚ್ಚಾಗುತ್ತವೆ.

# ತನಿಖೆಯಾಗದೆ ಬಾಕಿ ಬಿಲ್ ಪಾವತಿ ಇಲ್ಲ; ಡಿಸೆಂಬರ್–ಜನವರಿಯಲ್ಲಿ 'ಯುವನಿಧಿ' ಜಾರಿ: ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಪ್ರಸಕ್ತ ವರ್ಷ ಪದವಿ, ಡಿಪ್ಲೊಮಾ ಮುಗಿಸಿದ ಇನ್ನು ಆರು ತಿಂಗಳೊಳಗೆ ಕೆಲಸ ಸಿಗದಿರುವ ನಿರುದ್ಯೋಗಿ ಯುವಕ–ಯುವತಿಯರಿಗೆ ರಾಜ್ಯ ಸರ್ಕಾರದಿಂದ ಸಹಾಯ ಧನ ನೀಡುವ ಯುವನಿಧಿ ಯೋಜನೆಯನ್ನು ಡಿಸೆಂಬರ್ ಅಥವಾ ಜನವರಿಯಲ್ಲಿ ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.



ಎರಡು ದಿನಗಳ ರಾಜ್ಯ ವಕೀಲರ ಸಮ್ಮೇಳನಕ್ಕೆ ಆಗಮಿಸಿದ್ದ ವೇಳೆ ಇಂದು ಮೈಸೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಯಾವುದೇ ಪದವಿ ಗಳಿಸಿದ ನಿರುದ್ಯೋಗ ಯುವಕ–ಯುವತಿಯರಿಗೆ ಯುವನಿಧಿ ಯೋಜನೆಯಡಿ ತಿಂಗಳಿಗೆ 3 ಸಾವಿರ ರೂಪಾಯಿಯನ್ನು ಮತ್ತು ಡಿಪ್ಲೊಮಾ ಪದವೀಧರರಿಗೆ ತಿಂಗಳಿಗೆ ಒಂದೂವರೆ ಸಾವಿರ ರೂಪಾಯಿಗಳನ್ನು ನೀಡುವ ಯೋಜನೆ ಇದಾಗಿರುತ್ತದೆ ಇನ್ನು ಆರು ತಿಂಗಳು ಎಂದರೆ ಡಿಸೆಂಬರ್, ಜನವರಿಯಾಗುತ್ತದೆ, ಆ ವೇಳೆಗೆ ಯುವನಿಧಿ ಯೋಜನೆ ಜಾರಿಗೆ ಬರುತ್ತದೆ ಎಂದರು.

ಗೃಹಲಕ್ಷ್ಮೀ ಯೋಜನೆಗೆ ಈವರೆಗೆ 1.6 ಕೋಟಿ ಜನ ನೋಂದಣಿ ಮಾಡಿಕೊಂಡಿದ್ದಾರೆ. ನೋಂದಣಿ ಕಾರ್ಯಕ್ಕೆ ಯಾವುದೇ ಸಮಯ ನಿಗದಿ ಇಲ್ಲ. ಈ ತಿಂಗಳಲ್ಲಿ ನೋಂದಣಿ ಮಾಡಿಸುವವರ ಸಂಖ್ಯೆ ಹೆಚ್ಚಬಹುದು. ಡಿಸೆಂಬರ್ ಅಥವಾ ಜನವರಿಯಲ್ಲಿ ಯುವನಿಧಿ ಯೋಜನೆ ಜಾರಿಯಾಗುತ್ತದೆ ಎಂದರು.

ಮಳೆ ಕಡಿಮೆಯಾಗಿರುವುದರಿಂದ ತಮಿಳು ನಾಡಿಗೆ ನೀರಿಲ್ಲ: ಈ ಬಾರಿ ಮುಂಗಾರು ಮಳೆ ಕೇರಳದಲ್ಲಿ ವಿಳಂಬವಾಗಿ ಕಡಿಮೆಯಾಗಿರುವುದರಿಂದ, ಕೊಡಗಿನಲ್ಲಿ ಮಳೆ ಕಡಿಮೆಯಾಗಿರುವುದರಿಂದ ಜಲಾಶಯಗಳಲ್ಲಿ ನೀರು ಕಡಿಮೆಯಾಗಿದೆ. ಇದುವರೆಗೆ ಹೆಚ್ಚುವರಿ ನೀರು ಬಂದರೆ ತಮಿಳು ನಾಡಿಗೆ ಬಿಡುತ್ತಿದ್ದೆವು. ಈ ಬಾರಿ ಹೆಚ್ಚುವರಿ ನೀರು ಬಿಡಲು ಆಗಲಿಲ್ಲ. ಹಾಗಾಗಿ ತಮಿಳು ನಾಡು ಸರ್ಕಾರ ತಗಾದೆ ತೆಗೆದಿದೆ, ನಮ್ಮ ರಾಜ್ಯದ ರೈತರ ಪರಿಸ್ಥಿತಿ ನೋಡಿಕೊಂಡು ನಾವು ನೀರು ಬಿಡುವ ಬಗ್ಗೆ ತೀರ್ಮಾನ ಮಾಡಬೇಕಾಗುತ್ತದೆ.

# ಭಾರತೀಯ ನ್ಯಾಯ ಸಂಹಿತೆ ಮಸೂದೆ: ಸುಳ್ಳು ಸುದ್ದಿ ಹರಡುವವರಿಗೆ 3 ವರ್ಷ ಜೈಲು ಶಿಕ್ಷೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ಲೋಕಸಭೆಯಲ್ಲಿ ಭಾರತೀಯ ನ್ಯಾಯ ಸಂಹಿತೆ ಮಸೂದೆ 2023 ಅನ್ನು ಮಂಡಿಸಿದ್ದು, ಸುಳ್ಳು ಸುದ್ದಿ ಹರಡುವವರಿಗೆ ಮೂರು ವರ್ಷ ಜೈಲು ಶಿಕ್ಷೆ ವಿಧಿಸಲಾಗುತ್ತಿದೆ.

ಪ್ರಸ್ತಾವಿತ ಮಸೂದೆಯನ್ನು ಪರಿಶೀಲನೆಗಾಗಿ ಸ್ಥಾಯಿ ಸಮಿತಿಗೆ ಕಳುಹಿಸಲಾಗಿದೆ. ಭಾರತದ ಸಾರ್ವಭೌಮತ್ವ ಮತ್ತು ಭದ್ರತೆಗೆ ಧಕ್ಕೆ ತರುವಂತಹ 'ನಕಲಿ ಸುದ್ದಿ ಅಥವಾ ತಪ್ಪು ಮಾಹಿತಿಗಳನ್ನು' ಹರಡುವವರಿಗೆ ಸೆಕ್ಷನ್ 195 ರ ಅಡಿಯಲ್ಲಿ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶ ನೀಡಲಾಗಿದೆ.

ಸೆಕ್ಷನ್ 195(1) ಡಿ ಪ್ರಕಾರ, "ಭಾರತದ ಸಾರ್ವಭೌಮತೆ ಏಕತೆ ಮತ್ತು ಸಮಗ್ರತೆ ಅಥವಾ ಭದ್ರತೆಗೆ ಧಕ್ಕೆ ತರುವಂತಹ ಸುಳ್ಳು ಅಥವಾ ತಪ್ಪುದಾರಿಗೆಳೆಯುವ ಮಾಹಿತಿಯನ್ನು ಸಿದ್ಧಪಡಿಸಿದರೆ ಅಥವಾ ಪ್ರಕಟಿಸಿದರೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ದಂಡ ಅಥವಾ ಎರಡನ್ನೂ ವಿಧಿಸಲಾಗುತ್ತದೆ" ಎಂದು ಪ್ರಸ್ತಾವಿತ ಕಾನೂನು ಹೇಳುತ್ತದೆ.

ಹೊಸ ಮಸೂದೆಯು ಮಹಿಳೆಯರು ಮತ್ತು ಮಕ್ಕಳ ವಿರುದ್ಧದ ಅಪರಾಧಗಳು, ಕೊಲೆಗಳು ಮತ್ತು ದೇಶವಿರೋಧಿ ಅಪರಾಧಗಳ ಕಾನೂನುಗಳಿಗೆ ಆದ್ಯತೆ ನೀಡುತ್ತದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ಲೋಕಸಭೆಯಲ್ಲಿ ಮೂರು ಮಸೂದೆಗಳನ್ನು ಮಂಡಿಸಿದ್ದು, ಇದು ನ್ಯಾಯವನ್ನು ನೀಡುವ ಮತ್ತು ಸಂವಿಧಾನದ ಪ್ರಕಾರ ಭಾರತೀಯ ನಾಗರಿಕರಿಗೆ ನೀಡಿದ ಹಕ್ಕುಗಳನ್ನು ರಕ್ಷಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

# ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ 21 ಪಿಸ್ತೂಲ್‌ಗಳನ್ನು ಹೊಂದಿದ್ದ ವ್ಯಕ್ತಿಯ ಬಂಧನ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ, ದೆಹಲಿ ಪೊಲೀಸರ ವಿಶೇಷ ಘಟಕ, 32 ವರ್ಷದ ವ್ಯಕ್ತಿಯನ್ನು ಬಂಧಿಸಿದ್ದು, ಆತನಿಂದ 21 ಪಿಸ್ತೂಲ್‌ಗಳನ್ನು ವಶಪಡಿಸಿಕೊಂಡಿದೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ.

ಮಧ್ಯಪ್ರದೇಶದ ಸಾಗರ್ ನಿವಾಸಿ ಲಾಲ್ ಸಿಂಗ್ ಚಾದರ್ ತನ್ನ ತವರು ರಾಜ್ಯದ ಬುರ್ಹಾನ್‌ಪುರದಲ್ಲಿ ಅಕ್ರಮ ಶಸ್ತ್ರಾಸ್ತ್ರಗಳನ್ನು ಖರೀದಿಸಿ, ದೆಹಲಿ–ಎನ್‌ಸಿಆರ್‌ಗೆ ಸರಬರಾಜು ಮಾಡುತ್ತಿದ್ದ ಎಂದು ಅವರು ಹೇಳಿದ್ದಾರೆ.

ಆಗಸ್ಟ್ 4 ರಂದು ಚಾದರ್ ತನ್ನ ಸಂಪರ್ಕದಲ್ಲಿರುವ ಒಬ್ಬರಿಗೆ ಶಸ್ತ್ರಾಸ್ತ್ರಗಳನ್ನು ತಲುಪಿಸಲು ರಿಂಗ್ ರೋಡ್‌ನಲ್ಲಿರುವ ಗಾಂಧಿ ಮ್ಯೂಸಿಯಂ ಬಳಿ ತೆರಳುತ್ತಿದ್ದ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿತು ಎಂದು ವಿಶೇಷ ಪೊಲೀಸ್ ಆಯುಕ್ತ (ವಿಶೇಷ ಸೆಲ್) ಎಚ್‌ಜಿಎಸ್ ಧಲಿವಾಲ್ ಅವರು ತಿಳಿಸಿದ್ದಾರೆ.

ನಂತರ ಚಾದರ್ ಬಂಧನಕ್ಕೆ ಬಲೆ ಬೀಸಲಾಯಿತು ಮತ್ತು ಮಧ್ಯಾಹ್ನ 3.20 ರ ಸುಮಾರಿಗೆ ಆತನನ್ನು ಬಂಧಿಸಲಾಯಿತು.

ಚಾದರ್ ನಿಂದ .32 ಬೋರ್‌ನ 21 ಪಿಸ್ತೂಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಧಲಿವಾಲ್ ಹೇಳಿದ್ದಾರೆ.

ಅಕ್ರಮ ಶಸ್ತ್ರಾಸ್ತ್ರ ಪೂರೈಕೆ ದಂಧೆ ನಡೆಸುತ್ತಿದ್ದ ಸಾಗರ್‌ನ ರಾಜೇಶ್ ಪಯಾಸಿಯೊಂದಿಗೆ ಸಂಪರ್ಕಕ್ಕೆ ಬಂದ ನಂತರ ಚಾದರ್ ದೆಹಲಿ–ಎನ್‌ಸಿಆರ್‌ನಲ್ಲಿ ಅಕ್ರಮ ಶಸ್ತ್ರಾಸ್ತ್ರ ಪೂರೈಸಲು ಪ್ರಾರಂಭಿಸಿದ ಎಂದು ಅಧಿಕಾರಿ ತಿಳಿಸಿದ್ದಾರೆ.

### ಅಧಿಕ ಶ್ರಾವಣ ಮಾಸದ ಇಷ್ಟಲಿಂಗ ಮಹಾಪೂಜಾ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಪತ್ತು ಬೆಳೆದಂತೆ ಸಭ್ಯತೆ–ಸಂಸ್ಕೃತಿಯೂ ಬೆಳೆಯಲಿ



■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ವೀರಶೈವ ಧರ್ಮದ ಸಂಸ್ಕಾರಗಳು ಮಾನವ ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ಕಾರಣವಾಗಿವೆ. ಮನುಷ್ಯನಲ್ಲಿ ಆತ್ಮಬಲ ಬೆಳೆಯಲು ಆಧ್ಯಾತ್ಮದ ಹಸಿವು ಬೇಕು. ಸಂಪತ್ತು ಬೆಳೆದಂತೆ ಸಭ್ಯತೆ–ಸಂಸ್ಕೃತಿ ಎಲ್ಲರಲ್ಲಿ ಬೆಳೆದುಬರುವ ಅವಶ್ಯಕತೆಯಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಜರುಗಿದ ಅಧಿಕ ಶ್ರಾವಣ ಮಾಸದ ಇಷ್ಟಲಿಂಗ ಮಹಾಪೂಜಾ ಹಾಗೂ ಜನ ಜಾಗೃತಿ ಧರ್ಮ ಸಮಾವೇಶದ 3ನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದಲ್ಲಿ ಮಾರ್ಗವಿದೆ, ವೇಗವಿಲ್ಲ. ವಿಜ್ಞಾನದಲ್ಲಿ ವೇಗವಿದೆ, ಮಾರ್ಗವಿಲ್ಲ. ಇವೆರಡರ ಸಮನ್ವಯದಿಂದ ಸರ್ವಾಂಗೀಣ ಪ್ರಗತಿ ಸಾಧ್ಯ. ಅಂತರಂಗ ಬಹಿರಂಗ ಶುದ್ಧಿಗೆ ಆದ್ಯತೆಯನ್ನು ಕೊಟ್ಟ ವೀರಶೈವ ಧರ್ಮ ಸಂವೇದನಾಶೀಲ ಆದರ್ಶತೆಯನ್ನು ಹೊಂದಿದೆ. ದೇಶಕ್ಕೊಂದು ಸಂವಿಧಾನ ಇರುವಂತೆ ವೀರಶೈವ ಧರ್ಮಕ್ಕೂ ಒಂದು ಸಂವಿಧಾನವಿದೆ. ಅಷ್ಟಾವರಣ, ಪಂಚಾಚಾರ ಮತ್ತು ಷಟ್ಸ್ಥಲಗಳೇ ತತ್ವ ತ್ರಯಗಳಾಗಿವೆ. ಇವುಗಳ ಆಚರಣೆಯಿಂದ ಮಾನವ ಜೀವನ ಉಜ್ವಲಗೊಳ್ಳುವುದೆಂದು ರೇಣುಕ ಗೀತೆಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಸ್ಪಷ್ಟಪಡಿಸಿದ್ದಾರೆ. ಪ್ರಾಪಂಚಿಕ ಸಂಬಂಧಗಳು ಹೆಚ್ಚು ಕಡಿಮೆ ಆಗಬಹುದು. ಆದರೆ, ಗುರು–ಶಿಷ್ಯರ ಸಂಬಂಧ ಯಾವಾಗಲೂ ಚಿರಂತನವಾಗಿರುತ್ತದೆ. ಲೋಕದ ಕತ್ತಲೆ ಕಳೆಯಲು ಸೂರ್ಯ ಬೇಕು. ಅಜ್ಞಾನ ಕಳೆಯಲು ಗುರು ಬೋಧಾಮೃತ ಅವಶ್ಯಕವಾಗಿದೆ ಎಂದರು.

ಬಾಪೂಜಿ ವಿದ್ಯಾಸಂಸ್ಥೆಯ ನಿರ್ದೇಶಕಿ ಡಾ. ಪ್ರಭಾ ಮಲ್ಲಿಕಾರ್ಜುನ ಇವರಿಗೆ 'ಜನ ಸೇವಾ ಶಿರೋಮಣಿ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಸಮಾರಂಭದಲ್ಲಿ ಉದಯಕುಮಾರ, ಬಸವರಾಜ್ ಉತ್ತಂಗಿ, ಚೆಲುವಪ್ಪ, ಪ್ರವೀಣಕುಮಾರ್, ವೀರಮ್ಮ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಅಮ್ಮಿನಭಾವಿಯ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವ ಜೀವನದ ಉತ್ಕರ್ಷತೆಗೆ ಕಾರಣವಾಗಿರುವ ಧರ್ಮ ಮತ್ತು ಆಚರಣೆಯ ಅರಿವನ್ನು ಪಡೆಯಲು ಮುಂದಾಗಬೇಕು. ಧರ್ಮದ ದೋಣಿಗೆ ರಂಧ್ರ ಕೊರೆಯುವ ಕೆಲಸ ಯಾರೂ ಮಾಡಬಾರದು. ವೀರಶೈವ ಧರ್ಮದಲ್ಲಿರುವ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಅರಿತು ಬಾಳಬೇಕೆಂದರು. ನೇತೃತ್ವ ವಹಿಸಿದ ಮರಿಯಮ್ಮನಹಳ್ಳಿ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧರ್ಮ ಎಂಬುದು ಹಸಿದವನಿಗೆ ಅನ್ನ, ಬಾಯಾರಿದವನಿಗೆ ನೀರು ಇದ್ದಂತೆ. ಧರ್ಮದ ಯಥಾರ್ಥವಾದ ಜ್ಞಾನ ಅರಿತು ಬಾಳಿದರೆ, ಜೀವನದಲ್ಲಿ ಬೆಳಕು ಕಾಣಲು ಸಾಧ್ಯವಗುವುದೆಂದರು.

ಅಕ್ಕಮಹಾದೇವಿ ಸಮಾಜದ ಅಧ್ಯಕ್ಷೆ ಕಂಚಿಕೇರಿ ಸುಶೀಲಮ್ಮ, ಮಹಿಳಾ ಸಮಾಜದ ಅಧ್ಯಕ್ಷೆ ನೀಲಗುಂದ ಜಯಮ್ಮ, ಡಿಹೆಚ್‌ಯುಸಿಬಿ ಬ್ಯಾಂಕ್‌ನ ಉಪಾಧ್ಯಕ್ಷೆ ಜಯಮ್ಮ ಬಿ ಹೆಚ್, ಅಭಾವೀಲಿಂ ಮಹಿಳಾ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷೆ ಜ್ಯೋತಿ ರಾಧೇಶ್ ಜಂಬಿಗಿ, ದಾವಣಗೆರೆ ಅರ್ಬನ್ ಕೋ–ಆಪ್ ಬ್ಯಾಂಕ್ ಲಿ. ನಿರ್ದೇಶಕಿ ಅಂದನೂರ ಅರ್ಚನ ರುದ್ರಮುನಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಹರಿಹರದ ಕಾಂತರಾಜ ಮತ್ತು ವೀರೇಶ ಬಡಿಗೇರ ಇವರಿಂದ ಸಂಗೀತ ಜರುಗಿತು. ಬಾದಾಮಿ ಮಲ್ಲಿಕಾರ್ಜುನ ಸ್ವಾಗತಿಸಿದರು. ಕೆ ಎಂ ಚನ್ನಬಸವಯ್ಯ ಜಗದ್ಗುರುಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸಿದರು. ಉಪನ್ಯಾಸಕ ಮಲ್ಲಯ್ಯನವರು ನಿರೂಪಿಸಿದರು.

# ತಮಿಳುನಾಡು ಸರ್ಕಾರದ ನೀಟ್ ವಿರೋಧಿ ಮಸೂದೆಗೆ ಯಾವತ್ತೂ ಸಹಿ ಹಾಕಲ್ಲ: ಗವರ್ನರ್ ಆರ್ ಎನ್ ರವಿ

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕಾಯುತ್ತಿರುವ ತಮಿಳುನಾಡು ಸರ್ಕಾರದ ನೀಟ್ ವಿರೋಧಿ ಮಸೂದೆಗೆ ನಾನು ಯಾವತ್ತೂ ಒಪ್ಪಿಗೆ ನೀಡುವುದಿಲ್ಲ ಎಂದು ತಮಿಳುನಾಡು ರಾಜ್ಯಪಾಲ ಆರ್ ಎನ್ ರವಿ ಅವರು ಶನಿವಾರ ಖಡಾಖಂಡಿತವಾಗಿ ಹೇಳಿದ್ದಾರೆ.

ರಾಷ್ಟ್ರೀಯ ಪ್ರವೇಶ ಮತ್ತು ಅರ್ಹತಾ ಪರೀಕ್ಷೆ(NEET) ಇಲ್ಲದ ಸಾಧನೆಗಳು ಭವಿಷ್ಯಕ್ಕೆ ಸಾಕಾಗುವುದಿಲ್ಲ. ಅರ್ಹತಾ ಪರೀಕ್ಷೆ ಉಳಿಯಬೇಕು ಎಂದು ರವಿ ಹೇಳಿದ್ದಾರೆ.

"ನೋಡಿ, ನಾನು ಯಾವತ್ತೂ ನೀಟ್ ವಿರೋಧಿ ಮಸೂದೆಗೆ ಸಹಿ ಹಾಕಲ್ಲ; ನನ್ನ ಮಕ್ಕಳು ಬೌದ್ಧಿಕವಾಗಿ ಅಸಮರ್ಥರಾಗುವುದು ನನಗೆ ಇಷ್ಟವಿಲ್ಲ. ನಮ್ಮ ಮಕ್ಕಳು ಸ್ಪರ್ಧಿಸಿ ಉತ್ತಮರಾಗಬೇಕೆಂದು ನಾನು ಬಯಸುತ್ತೇನೆ. ಅದನ್ನು ಅವರು ಸಾಬೀತುಪಡಿಸಿದ್ದಾರೆ" ಎಂದು ತಮಿಳುನಾಡು ರಾಜ್ಯಪಾಲರು ಹೇಳಿದ್ದಾರೆ.

ಇಂದು ರಾಜಭವನದಲ್ಲಿ ನೀಟ್ UG-2023ರಲ್ಲಿ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳೊಂದಿಗೆ ನಡೆದ ಸಂವಾದದಲ್ಲಿ ಮಾತನಾಡಿದ ರಾಜ್ಯಪಾಲರು, "ಓಇಇಖಿ ನಿಂದ ವಿನಾಯಿತಿ ಕೋರಿದ ತಮಿಳುನಾಡು ಸರ್ಕಾರದ ಮಸೂದೆ ತಮ್ಮ ಒಪ್ಪಿಗೆ ಇಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.

"ನಾನು ನಿಮಗೆ ತುಂಬಾ ಪ್ರಾಮಾಣಿಕವಾಗಿ ಹೇಳುತ್ತಿದ್ದೇನೆ, ನಾನು ಎಂದಿಗೂ ಓಇಇಖಿ (ಮಸೂದೆ) ಗೆ ಕ್ಲಿಯರೆನ್ಸ್ ನೀಡುವುದಿಲ್ಲ. ಅದು ತುಂಬಾ ಸ್ಪಷ್ಟವಾಗಿದೆ. ಅದು ರಾಷ್ಟ್ರಪತಿಗಳ ಬಳಿ ಹೋಗಿದೆ ಮತ್ತು ಸಮವರ್ತಿ ಪಟ್ಟಿಯ ವಿಷಯವಾಗಿರುವುದರಿಂದ ರಾಷ್ಟ್ರಪತಿಗಳೇ ನಿರ್ಧಾರ ತೆಗೆದುಕೊಳ್ಳಲಿದ್ದಾರೆ" ಎಂದು ರವಿ ಅವರು ತಿಳಿಸಿದ್ದಾರೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# ಸಂತೆ ಮಾರುಕಟ್ಟೆ ಸ್ಥಳಾಂತರ ಸೂಕ್ತವಲ್ಲ

▶▶ ಮೊದಲನೇ ಪುಟದಿಂದ

ಜಗದೀಶ ಸಂಗನಾಳಮಠ ಮಾತನಾಡಿ, ತರಕಾರಿ ಸಂತೆಯನ್ನು ಅಬ್ಬಿಗೇರಿ ರಸ್ತೆಗೆ ಬದಲಾವಣೆ ಮಾಡುವುದು ಸರಿಯಲ್ಲ. ಆ ರಸ್ತೆಯಲ್ಲಿ ನಿತ್ಯ ನೂರಾರು ವಿದ್ಯಾರ್ಥಿಗಳು ಹಾಗೂ ವಾಹನಗಳು ಸಂಚರಿಸುತ್ತವೆ. ಅಲ್ಲದೆ, ಅದು ಮಾರುಕಟ್ಟೆಯಾದ್ದರಿಂದ ಅಲ್ಲಿಗೆ ತೆರಳಿ ಸಂತೆ ಮಾಡಲು ಮಹಿಳೆಯರು ಹಿಂಜರಿಯುತ್ತಾರೆ. ಆದ್ದರಿಂದ ಸಂತೆಯನ್ನು ಈಗ ಇದ್ದ ಸ್ಥಳದಲ್ಲಿಯೇ ಮುಂದುವರೆಸಲು ಅನುಕೂಲ ಮಾಡಿಕೊಡಬೇಕು ಎಂದು ಹೇಳಿದರು.

ಪಡೆಯದೆ ಏಕಾಏಕಿ ಸಂತೆಯನ್ನು ಸ್ಥಳಾಂತರಿಸಲು ತೆಗೆದುಕೊಂಡಿರುವ ನಿರ್ಧಾರ ಸೂಕ್ತವಲ್ಲ. ಆದ್ದರಿಂದ ಈಗ ನಡೆಯುವ ಸ್ಥಳದಲ್ಲೇ ಸಂತೆ ನಡೆಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ ಪಂ ಮಾಜಿ ಅಧ್ಯಕ್ಷ ಶರಣಪ್ಪ ಕಲಾಲಬಂಡಿ, ಉಮೇಶ ಸಂಗನಾಳಮಠ, ಮುತ್ತಣ್ಣ ಕುರಡಗಿ, ಮುತ್ತಣ್ಣ ಮಾವಿನಕಾಯಿ, ಶಿವಣ್ಣ ಮುಗಳಿ, ವಸಂತ ಅಣ್ಣಿಗೇರಿ, ಯು ಆರ್ ಸಂಕನಗೌಡ್ರ, ಎಸ್ ಬಿ ಹೊಸಮನಿ, ಎಂ ಕೆ ಲಕ್ಷ್ಮೇಶ್ವರ, ಅಶೋಕ ಧರಣೆಪ್ಪಗೌಡ್ರ, ಎಸ್ ಜಿ ದಿಂಡೂರ, ಬಸವರಾಜ ಧರ್ಮಾಯತ, ಬಿ ವಿ ಹಕಾರಿ, ಎಸ್ ಬಿ ಕುಷ್ಟಗಿ, ಎಸ್ ಎಂ ಕಿನ್ನಾಳಮಠ, ಆರ್ ಎನ್ ಬೂದಗುಂಪಿ, ಎಸ್ ಕೆ ಜಂತ್ಲಿ, ಶಿವಪ್ಪ ಕಾಟಿ, ಮಲ್ಲಪ್ಪ ಗಂಗರಗೊಂಡ, ವಿನಾಯಕ ಹೊಸಮನಿ, ಬಸಪ್ಪ ಪಿಡಗೊಂಡ, ತರಕಾರಿ ವರ್ತಕರು ಇದ್ದರು.

# 'ದೇಶಭಕ್ತ ವೀರರಿಗೆ ಗೌರವ ಸಮರ್ಪಣೆ'

▶▶ ಮೊದಲನೇ ಪುಟದಿಂದ

ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತದ ನಿರ್ಮಾಣದಲ್ಲಿ ನಾನು ಪಾಲ್ಗೊಳ್ಳುವುದಾಗಿ ಪ್ರಮಾಣ ಮಾಡುತ್ತೇನೆ, ಯಾವುದೇ ರೀತಿಯ ವಸಾಹತುಶಾಹಿ ಮನಸ್ಥಿತಿಯ ಕುರುಹನ್ನು ತೊಡೆದು ಹಾಕುವುದಾಗಿ ಪ್ರಮಾಣ ಮಾಡುತ್ತೇನೆ, ನಮ್ಮ ಶ್ರೀಮಂತ ಸಂಸ್ಕೃತಿ ಪರಂಪರೆಯನ್ನು ಉಳಿಸಿ-ಬೆಳೆಸುವುದಾಗಿ ಹೆಮ್ಮೆಯಿಂದ ಪ್ರಮಾಣ ಮಾಡುತ್ತೇನೆ, ದೇಶದ ಏಕತೆ ಮತ್ತು ಒಗ್ಗಟ್ಟಿಗಾಗಿ ಶ್ರಮಿಸುವುದಾಗಿ ಪ್ರಮಾಣ ಮಾಡುತ್ತೇನೆ, ದೇಶಕ್ಕಾಗಿ ನನ್ನ ಕರ್ತವ್ಯಗಳು ಮತ್ತು ಜವಾಬ್ದಾರಿಗಳು ನಿರ್ವಹಿಸುವುದಾಗಿ ಪ್ರಮಾಣ ಮಾಡುತ್ತೇನೆ, ತ್ಯಾಗ-ಬಲಿದಾನಗೈದ ದೇಶದ ಕೆಚ್ಚೆದೆಯ ವೀರರಿಗೆ ಗೌರವ ಸಲ್ಲಿಸುವುದಾಗಿ ಹಾಗೂ ದೇಶದ ರಕ್ಷಣೆ, ಪ್ರಗತಿಗೆ ನನ್ನನ್ನು ಸಮರ್ಪಿಸಿಕೊಳ್ಳುವುದಾಗಿ ಪ್ರಮಾಣ ಮಾಡುತ್ತೇನೆ ಎಂಬ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆಯ ಉಪಾಧ್ಯಕ್ಷೆ ಸುನಂದಾ ಪ್ರಕಾಶ ಬಾಕಳೆ, ಪೌರಾಯುಕ್ತರಾದ ರಮೇಶ್ ಎಸ್ ಸುಣಗಾರ, ಪರಿಸರ ಅಭಿಯಂತರ ಆನಂದ ಬದಿ, ಎಂ ಎ ಮುಜಾವರ, ಎಂ ಆರ್ ಪಾಟೀಲ, ಸದಸ್ಯರಾದ ವಿದ್ಯಾವತಿ ಅಮರನಾಥ ಗಡಗಿ, ಕಚೇರಿ ವ್ಯವಸ್ಥಾಪಕ ಪರಶುರಾಮ ಶೇರಖಾನೆ, ಸಮುದಾಯ ಸಂಘಟನಾ ಅಧಿಕಾರಿ ಶೋಭಾ ಬೆಳ್ಳಿಕೊಪ್ಪ, ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು, ನಗರಸಭೆ ಹೈಸ್ಕೂಲ್ ಶಿಕ್ಷಕರು, ವಿದ್ಯಾರ್ಥಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಓದಿನ ಕಡೆಗೆ ಹೆಚ್ಚಿನ ಶ್ರದ್ಧೆಯಿರಲಿ

▶▶ ಮೊದಲನೇ ಪುಟದಿಂದ

ಜೋಗಣ್ಣವರ ಅತಿಥಿಗಳನ್ನು ಸ್ವಾಗತಿಸಿ, ಪರಿಚಯಿಸಿದರು. ಕೊನೆಯಲ್ಲಿ ಜೆ ಜಿ ಕಟ್ಟಿಮನಿ ವಂದಿಸಿದರು.

ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಆರ್ ಎಸ್ ಪಾಟೀಲ, ಹಿರಿಯ ಉಪನ್ಯಾಸಕರಾದ ಬಿ ಬಿ ಪಾಟೀಲ, ಎ ಐ ಹಿಂಡಿ, ಎಸ್ ಎಂ ಪಾಟೀಲ, ಆರ್ ಎಸ್ ಹೆಬಸೂರ, ಎಸ್ ಎನ್ ಬಗಾಡೆ, ಎಸ್ ಬಿ ಮಾಳಗಿಮನಿ, ಆರ್ ಎ ಸೂಡಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಸಾರ್ವಜನಿಕರಿಗೆ ತಪ್ಪದ ಗೋಳು

# ಕಸದ ತೊಟ್ಟಿಯಾದ ಸರ್ಕಾರಿ ಕಟ್ಟಡ





■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪಟ್ಟಣದ ಮುಖ್ಯ ಬಜಾರದ ಶ್ರೀ ಕನ್ನಿಕಾಪರಮೇಶ್ವರಿ ದೇವಾಸ್ಥಾನದ ಹತ್ತಿರ ಇರುವ ಹಳೇ ತಹಸೀಲ್ದಾರ್ ಕಚೇರಿ ಕಟ್ಟಡ ಹಲವಾರು ವರ್ಷಗಳಿಂದ ನಿರುಪಯುಕ್ತವಾಗಿದ್ದು, ಕಸ-ತ್ಯಾಜ್ಯಗಳನ್ನು ಸಂಗ್ರಹಿಸುವ ತೊಟ್ಟಿಯಾಗಿ ಮಾರ್ಪಾಡಾಗಿದ್ದು, ಇಲ್ಲದ ಖಾಯಿಲೆಗಳನ್ನು ಹರಡುವ ಕಾರ್ಖಾನೆಯಂತಾಗಿದೆ. ಸದರಿ ಕಟ್ಟಡವನ್ನು ಜನೋಪಯೋಗಿ ಕಾರ್ಯಕ್ಕೆ ಬಳಸಬೇಕೆಂದು ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

2008ರ ಪೂರ್ವದಲ್ಲಿ ಈ ಜಾಗದಲ್ಲಿ ತಹಸೀಲ್ದಾರ್ ಕಛೇರಿ ಹಾಗೂ ಪೊಲೀಸ್ ಠಾಣೆಗಳಿದ್ದವು. ಇದೀಗ ಪೊಲೀಸ್ ಠಾಣೆ ಹಾಗೂ ತಹಸೀಲ್ದಾರ ಕಚೇರಿಗಳು ಬೇರೆ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಮುಖ್ಯ ಮಾರುಕಟ್ಟೆಯ ಮದ್ಯಭಾಗದಲ್ಲಿರುವ ಹಳೆ ತಹಸೀಲ್ದಾರ್, ಪೊಲೀಸ್ ಠಾಣೆಯ ಕಟ್ಟಡ ಅಂದಿನಿಂದ ಇಂದಿನವರೆಗೂ ಗಬ್ಬು ವಾಸನೆ ಬೀರುತ್ತಾ, ಸುತ್ತಮುತ್ತಲಿನ ನಿವಾಸಿಗಳಿಗೆ ಕಿರಿಕಿರಿ ಹುಟ್ಟಿಸುತ್ತಿದೆ.

> ಪಟ್ಟಣದ ಮದ್ಯ ಭಾಗದಲ್ಲಿರುವ ಹಳೆಯ ತಹಸೀಲ್ದಾರ್, ಪೊಲೀಸ್ ಠಾಣಾ ಕಚೇರಿಯ ಕಟ್ಟಡ ಹಲವು ವರ್ಷಗಳಿಂದ ಶಿಥಿಲಗೊಂಡು ಕಸತ್ಯಾಜ್ಯಗಳನ್ನು ಸಂಗ್ರಹಿಸುವ ತೊಟ್ಟಿಯಂತಾಗಿದ್ದು, ಹಲವಾರು ರೋಗ-ರುಜಿನಗಳ ಮೂಲವಾಗಿದೆ. ಈ ಕಟ್ಟಡದ ಆವರಣದಲ್ಲಿ ಸ್ವಚ್ಛತೆಯಿಲ್ಲದೆ ಸೊಳ್ಳೆ, ತಿಗಣಿ, ವಿಷ ಜಂತುಗಳ ಕಾಟ ಹೆಚ್ಚುತ್ತಿದೆ. ಶಿಥಿಲಗೊಂಡಿರುವ ಕಟ್ಟಡವನ್ನು ನೆಲಸಮಗೊಳಿಸಿ, ಸದ್ಬಳಕೆಯಾಗುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಯವರು ಸೂಕ್ತ ಕ್ರಮ ಕೈಗೊಳ್ಳಬೇಕು.
>
> **– ಅಡಿವೆಪ್ಪ ಚಲವಾದಿ.**
> ಸಾಮಾಜಿಕ ಕಾರ್ಯಕರ್ತರು.

ಈ ಬಗ್ಗೆ ಮುಂಡರಗಿ ತಹಸೀಲ್ದಾರರಾಗಿದ್ದ ಆಶಪ್ಪ ಪೂಜಾರಿಯವರು, ಹಳೇ ತಹಸೀಲ್ದಾರ್ ಕಟ್ಟಡದ ಜಾಗದಲ್ಲಿ ತಹಸೀಲ್ದಾರ್ ಮತ್ತು ಸಿಬ್ಬಂದಿಗಳಿಗೆ ವಸತಿಗೃಹ ನಿರ್ಮಿಸುವ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರದಿಂದ ಅನುದಾನ ಮಂಜೂರಾತಿ ದೊರೆತ ನಂತರ ವಸತಿಗೃಹ ನಿರ್ಮಿಸಲಾಗುವುದು ಎಂದು ಹೇಳಿದ್ದರು. ಇಲ್ಲಿಯವರೆಗೆ ಅನುದಾನವೂ ಇಲ್ಲದೆ, ಸ್ವಚ್ಛತೆಯ ಕ್ರಮವೂ ಇಲ್ಲದಂತಾಗಿದೆ. ಸದ್ಯ, ಕಟ್ಟಡದ ಮೇಲ್ಛಾವಣಿ ಕಿತ್ತು ಮಳೆ ನೀರು ಒಳಗಡೆಯೇ ನಿಲ್ಲುತ್ತಿದೆ. ಅವರಣಲ್ಲಿ ಗಿಡಗಂಟಿಗಳು ಬೆಳೆದು, ಹಾವು-ಚೇಳುಗಳಂತಹ ವಿಷ ಜಂತುಗಳಿಗೆ ಆಶ್ರಯ ತಾಣವಾಗಿದೆ.

ಜನ ನಿಬಿಡವಾಗಿರುವ ಈ ಕಟ್ಟಡದ ಆವರಣದಲ್ಲಿ ಮಾಂಸದ ಅಂಗಡಿಯವರು ತ್ಯಾಜ್ಯಗಳನ್ನು ತಂದು ಸುರಿಯುತ್ತಾರೆ. ಸಾರ್ವಜನಿಕರು ಸತ್ತ ಪ್ರಾಣಿಗಳನ್ನೂ ಇಲ್ಲಿಯೇ ಎಸೆಯುತ್ತಾರೆ. ಸ್ವಾಭಾವಿಕವಾಗಿ ಸೊಳ್ಳೆ, ನೊರ್ಜು, ಇಲಿ, ಹೆಗ್ಗಣಗಳ ಕಾಟವೂ ವಿಪರೀತವಾಗಿದ್ದು, ಇದರಿಂದ ಸುತ್ತಮುತ್ತಲಿರುವ ಮನೆಯ ಜನರು ಅನಾರೋಗ್ಯಕ್ಕೆ ತುತ್ತಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಗಳತೆಯ ದೂರದಲ್ಲಿ ತಾಲೂಕಾಸ್ಪತ್ರೆ ಹಾಗೂ ಪುರಸಭೆ ಕಚೇರಿ ಇದ್ದರೂ ಅಧಿಕಾರಿಗಳು ಇತ್ತ ಗಮನಹರಿಸುತ್ತಿಲ್ಲ. ಕಸ-ತ್ಯಾಜ್ಯಗಳನ್ನು ವಿಲೇವಾರಿಗೊಳಿಸಿ, ಶಿಥಿಲಗೊಂಡ ಈ ಕಟ್ಟಡವನ್ನು ಶೀಘ್ರವೇ ದುರಸ್ತಿಗೊಳಿಸಿ, ಸದ್ಬಳಕೆಗೆ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

> ಸುತ್ತಮುತ್ತಲಿನ ನಿವಾಸಿಗಳು ಈ ಕಟ್ಟಡದ ಜಾಗದಲ್ಲಿ ಸತ್ತ ಪಾಕ್ಷಿ-ಪ್ರಣಿಗಳನ್ನು ಎಸೆದು ಹೋಗುತ್ತಾರೆ. ದುರ್ವಾಸನೆಯಿಂದ ಇಲ್ಲಿ ಓಡಾಡುವವರು ಮೂಗು ಮುಚಿ ಸಾಗುವಂತಾಗಿದೆ. ನೂರಾರು ಮಕ್ಕಳು ಇದೇ ದಾರಿಯಲ್ಲಿ ಶಾಲೆಗೆ ಹೋಗುತ್ತಾರೆ. ಪ್ರತಿನಿತ್ಯ ಗೋಳು ಅನುಭವಿಸುವಂತಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಈ ಕಟ್ಟಡವನ್ನು ಸ್ವಚ್ಛಗೊಳಿಸಿ, ಸಾರ್ವಜನಿಕರಿಗಾಗುತ್ತಿರುವ ಅನಾನುಕೂಲವನ್ನು ನಿವಾರಿಸಬೇಕು.
>
> **– ಪರುಶುರಾಮ ಅಸೂಟಿ.**
> ಸ್ಥಳೀಯ ನಿವಾಸಿ.

## ವಿದ್ಯಾರ್ಥಿಗಳಿಂದ ರಾಷ್ಟ್ರಧ್ವಜ ಹಾಗೂ ಬ್ಯಾಡ್ಜ್ ತಯಾರು-ಸಾರ್ವಜನಿಕರಿಗೆ ವಿದ್ಯಾರ್ಥಿಗಳ ಕರೆ

# ಪ್ರಾತ್ಯಕ್ಷಿಕೆ ಕಣ್ತುಂಬಿಕೊಳ್ಳಲು ಬನ್ನಿ

■ ವಿಜಯಸಾಕ್ಷಿ ಸುದ್ದಿ, ರೋಣ



ಶಾಲಾ ವಿದ್ಯಾರ್ಥಿಗಳು ಸೇರಿಕೊಂಡು ಆಗಸ್ಟ್ 15 ರಂದು ವಿಭಿನ್ನವಾಗಿ ಸ್ವಾತಂತ್ರ್ಯೋತ್ಸವ ಆಚರಿಸಲು ಮುಂದಾಗಿದ್ದಾರೆ.

ಹೊಳೆಮಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಳೆ ಮಣ್ಣೂರು ಹಾಗೂ ಗಾಡಗೋಳಿ ಗ್ರಾಮಗಳ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಂದ ರಾಷ್ಟ್ರಧ್ವಜ ಸಂವಿಧಾನ ಪೀಠಿಕೆ ಹಾಗೂ ಬ್ಯಾಡ್ಜ್‌ಗಳನ್ನು ತಯಾರಿಸಿದ್ದು ದಿ. 14 /08/ 2023 ರಂದು ಸೋಮವಾರ ಮಧ್ಯಾಹ್ನ 03:00 ಗಂಟೆಗೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದಲ್ಲಿ ಪ್ರದರ್ಶನ ಏರ್ಪಡಿಸಿದ್ದಾರೆ.

ಮಕ್ಕಳಿಗೆ ಗ್ರಂಥಾಲಯ ಮೇಲ್ವಿಚಾರಕರು ಸಲಹೆ ಮತ್ತು ಸೂಚನೆ ನೀಡಿದ್ದು, ಗ್ರಾಮ ಪಂಚಾಯತಿ ಅನುದಾನದಲ್ಲಿ ಅವರಿಗೆ ಬೇಕಾದ ಸಾಮಗ್ರಿಗಳನ್ನು ಪೂರೈಸಿದ್ದಾರೆ, ಇನ್ನು ಆ ಪ್ರದರ್ಶನವನ್ನು ರೋಣ ತಾಲೂಕಿನ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರವಿ ಎ.ಎನ್ ಹಾಗೂ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಉದ್ಘಾಟಿಸಲಿದ್ದಾರೆ.

ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಉಪಾಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿರುವರು. ಗ್ರಾಮದ ಎಲ್ಲಾ ಸಾರ್ವಜನಿಕರು ಶಾಲಾ ಮಕ್ಕಳು ಸ್ವತಃ ತಮ್ಮ ಕೈಯಿಂದ ಕಲಾತ್ಮಕವಾಗಿ ತಯಾರಿಸಿರುವ ರಾಷ್ಟ್ರಧ್ವಜ ಬ್ಯಾಡ್ಜ್ ಹಾಗೂ ಸಂವಿಧಾನ ಪೀಠಿಕೆಗಳ ಪ್ರಾತ್ಯಕ್ಷಿಕೆಯನ್ನು ಕಣ್ತುಂಬಿಕೊಂಡು ಪ್ರೋತ್ಸಾಹಿಸಲು ವಿನಂತಿಸಿದ್ದಾರೆ.

# ಜನ್ಮದಿನದ ನಿಮಿತ್ತ ಸಸಿ ನೆಡುವ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ



ಶಹರದ ಭಾರತೀಯ ಜನತಾ ಪಕ್ಷದ ಶಹರ ಘಟಕದ ಅಧ್ಯಕ್ಷ, 28ನೇ ವಾರ್ಡ್‌ನ ನಗರಸಭಾ ಸದಸ್ಯ ಅನಿಲ್ ಎಮ್ ಅಬ್ಬಿಗೇರಿ ಅವರ ಜನ್ಮದಿನದ ಅಂಗವಾಗಿ ವಾರ್ಡ್‌ನ ಸದಸ್ಯರು ಗದಗ ನಗರದ ಟಿಳಕ ಪಾರ್ಕ್ ಉದ್ಯಾನವನವನ್ನು ಸ್ವಚ್ಛಗೊಳಿಸಿ ಸಸಿಗಳನ್ನು ನೆಡುವ ಮೂಲಕ ಶನಿವಾರ ಆಚರಿಸಿದರು.

ಈ ಸಂದರ್ಭದಲ್ಲಿ 24 ನೇ ವಾರ್ಡ್‌ನ ನಗರಸಭಾ ಸದಸ್ಯ ನಾಗರಾಜ ಹುಲಿಗೆಪ್ಪ ತಳವಾರ ಮಾತನಾಡಿ, ಜನ್ಮದಿನದ ನೆಪದಲ್ಲಿ ಅನಗತ್ಯ ಕಾರ್ಯಗಳಿಗೆ ಹಣ ಖರ್ಚು ಮಾಡುವ ಬದಲು, ಹೀಗೆ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸುವ, ಸಸಿ ನೆಡುವ ಕಾರ್ಯಗಳನ್ನು ಹಮ್ಮಿಕೊಂಡರೆ ಪರಿಸರವನ್ನು ರಕ್ಷಿಸಿದಂತಾಗುತ್ತದೆ ಎಂದರು. ಈ ಸಂದರ್ಭದಲ್ಲಿ ವಾರ್ಡ್‌ನ ಹಿರಿಯರಾದ ಗಾಳಪ್ಪನವರ, ಅಪ್ಪು ಕೊಟಗಿ, ಶಂಕರ ಮಲ್ಲಸಮುದ್ರ, ಕುಮಾರ ಕೋಟಿ, ಮಂಜು ನಾಲ್ವಡ, ಮಂಜುನಾಥ ಮಜ್ಜಿಗುಡ್ಡ, ಏಕನಾಥ ಮಲ್ಲಸಮುದ್ರ, ಸುನೀಲ ಮುಳ್ಳಾಳ ಹಾಗೂ 24ನೇ ವಾರ್ಡ್‌ನ ನೂರಾರು ಯುವಕರು ಪಾಲ್ಗೊಂಡು ಶುಭಾಶಯ ತಿಳಿಸಿದರು.

# ಪೌಷ್ಟಿಕ ಆಹಾರ ಸೇವಿಸಿ ಆರೋಗ್ಯ ಕಾಪಾಡಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಆರೋಗ್ಯಕ್ಕೆ ಪೌಷ್ಟಿಕ ಆಹಾರ ಅತ್ಯಗತ್ಯ. ಈ ಆಚರಣೆ ಉತ್ತಮ ಸಮಾಜದ ನಿರ್ಮಾಣವನ್ನು ಪ್ರಸ್ತುತಪಡಿಸುತ್ತದೆ. ಪೌಷ್ಟಿಕ ಆಹಾರದ ಬಗ್ಗೆ ಜನಸಾಮಾನ್ಯರಲ್ಲಿ ತಿಳುವಳಿಕೆ ಕಡಿಮೆಯಾಗಿದ್ದು, ಈ ಬಗ್ಗೆ ಹೆಚ್ಚಿನ ಮಾಹಿತಿ ನೀಡುವುದು ನ್ಯೂಟ್ರಿಷನ್ ಕಾರ್ಯಕ್ರಮದ ಆಚರಣೆಯ ಮುಖ್ಯ ಉದ್ದೇಶವಾಗಿದೆ ಎಂದು ಶ್ರೀ ವಿ ಪಿ ಗಾಲಾ ಸ್ಕೂಲ್ ಆಫ್ ನರ್ಸಿಂಗ್‌ನ ಪ್ರಾಚಾರ್ಯ ಅಮರಯ್ಯ ಚಿನ್ನಯ್ಯನಮಠ ಹೇಳಿದರು.

ಶ್ರೀ ವಿ ಪಿ ಗಾಲಾ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಪೌಷ್ಟಿಕ ಆಹಾರದ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮ ಆರೋಗ್ಯಕ್ಕೆ ಸಂತುಲಿತ ಆಹಾರ ಅಗತ್ಯ. ಇದರಲ್ಲಿ ಪೂರ್ಣ ಧಾನ್ಯಗಳು, ಹಣ್ಣು, ತರಕಾರಿಗಳು, ಹಾಲು ಮತ್ತು ಹಾಲಿನ ಉತ್ಪನ್ನಗಳು, ಮಾಂಸ, ಮೀನು, ಬೀಜಗಳು ಮೊದಲಾದವುಗಳು ಒಳಗೊಂಡಿರಬೇಕು. ಆರೋಗ್ಯದ ಮುಂದೆ ಯಾವುದೇ ರೀತಿಯ ಸುಖ-ಸಂಪತ್ತು ಮುಖ್ಯವಲ್ಲ. ನಾವು ಸೇವಿಸುವ ಆಹಾರದ ಮೇಲೆ ನಮ್ಮ ಆರೋಗ್ಯ ನಿಂತಿದೆ. ಪೌಷ್ಟಿಕ ಆಹಾರವನ್ನು ನಾವು ಸೇವಿಸದಿದ್ದರೆ, ನಮ್ಮ ದೇಹ ದೊಡ್ಡಮಟ್ಟದ ಆರೋಗ್ಯ ಸಮಸ್ಯೆಗಳಿಗೆ ಈಡಾಗುವುದು ಖಚಿತ. ಹಾಗಾಗಿ ನಾವೆಲ್ಲರೂ ಪೌಷ್ಟಿಕ ಆಹಾರ ಸೇವಿಸುವ ಪದ್ಧತಿಯನ್ನು ರೂಡಿಸಿಕೊಂಡು, ದೇಹದ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ವಿ ಗಾಲಾ, ನಿರ್ದೇಶಕ ಗುಂಜನ ಗಾಲಾ ಮುಂತಾದವರು ಹಾಜರಿದ್ದರು.

# ಎರಡು ಪ್ರಕರಣ ಬೇಧಿಸಿದ ಶಹರ ಪೊಲೀಸರು: ಉಸ್ತಾದ್ ಬಂಧನ

■ ವಿಜಯಸಾಕ್ಷಿ ಸುದ್ದಿ, ಗದಗ



ಎರಡು ಕಳ್ಳತನ ಪ್ರಕರಣವನ್ನು ಭೇದಿಸಿರುವ ಗದಗ ಶಹರ ಪೊಲೀಸರು, ಎಸ್.ಎಮ್ ಕೃಷ್ಣ ನಗರದ ಯುವಕನೊಬ್ಬನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತನನ್ನು ಎಸ್.ಎಮ್. ಕೃಷ್ಣ ನಗರದ ನಿವಾಸಿ, ಗೌಂಡಿ ಕೆಲಸ ಮಾಡುತ್ತಿದ್ದ ಅಲ್ತಾಫ್ ತಂದೆ ಅಬ್ದುಲ್ ಹಮೀದ್ ಉಸ್ತಾದ್ (25) ಎಂದು ಗುರುತಿಸಲಾಗಿದೆ. ಬಂಧಿತನಿಂದ ನಗದು 1ಲಕ್ಷ 90 ಸಾವಿರ ರೂಪಾಯಿ, ನಾಲ್ಕು ಜಿಮ್ ಪ್ಲೇಟ್ ಹಾಗೂ ಎರಡು ಡಂಬೆಲ್ಸ್ ಜಪ್ತಿ ಮಾಡಲಾಗಿದೆ.

ಬಂಧಿತ ಆರೋಪಿ ಅಲ್ತಾಫ್, ಸ್ಟೇಷನ್ ರಸ್ತೆಯ ಎಸ್ ಬಿಐ ಬ್ಯಾಂಕ್ ಬಳಿ ನಿಲ್ಲಿಸಿದ್ದ ಸ್ಕೂಟಿ ಒಂದರಲ್ಲಿದ್ದ 2ಲಕ್ಷ 40 ಸಾವಿರ ರೂಪಾಯಿಗಳನ್ನು 20-06-2023 ರಂದು ಕಳ್ಳತನ ಮಾಡಿದ್ದ. ಈ ಕುರಿತು ವ್ಯಾಪಾರಿ ವಾಲ್ಮೀಕಿ ಭವನದ ಹತ್ತಿರದ ಭಾಪಣಾ ಲೇಔಟ್ ನಿವಾಸಿ ಸೈಯದ್ ರಶೀದ್ ಅಬ್ದುಲ್ ಗಣಿ ಮಕಾನದಾರ ಎಂಬವರು ಶಹರ ಠಾಣೆಯಲ್ಲಿ ದೂರು ನೀಡಿದ್ದರು.

ಮತ್ತೊಂದು ಪ್ರಕರಣದಲ್ಲಿ ಹೊಂಬಳ ರಸ್ತೆಯಲ್ಲಿ ಇರುವ ಮುಕ್ತಿದಾಮದ ಕಾರ್ಯಾಲಯದ ಬೀಗ ಮುರಿದು 30 ಸಾವಿರ ರೂ. ಮೌಲ್ಯದ 4 ಜಿಮ್ ಡೆಂಬಲ್ಸ್ ಹಾಗೂ ಜಿಮ್ ವೇಟ್ ಪ್ಲೇಟ್ಸ್, ಟ್ರಝುರಿ ಮೀಟಿ ಅದರಲ್ಲಿದ್ದ 75ಸಾವಿರ ರೂ.ಗಳನ್ನು ಕಳ್ಳತನ ಮಾಡಿದ್ದ. ಈ ಕುರಿತು ಕಾರ್ಮಿಕ ನೀಲಕಂಠ ತಂದೆ ನಾಗಪ್ಪ ಕಾಳೆ ಎಂಬುವರು ಶಹರ ಠಾಣೆಗೆ ದೂರು ನೀಡಿದ್ದರು.

ಎರಡೂ ಪ್ರಕರಣಗಳನ್ನು ಭೇದಿಸಲು ಎಸ್ಪಿ ಬಿ. ಎಸ್ . ನೇಮಗೌಡ, ಡಿವೈಎಸ್ಪಿ ಮಡಿವಾಳಪ್ಪ ಸಂಕದ ಅವರ ಮಾರ್ಗದರ್ಶನದಲ್ಲಿ ಮಹಿಳಾ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರದೀಪ್ ಎಸ್ ನೇತೃತ್ವದಲ್ಲಿ ಶಹರ ಠಾಣೆಯ ಪಿಎಸ್‌ಐ ಜಿ.ಟಿ ಜಕ್ಕಲಿ ಹಾಗೂ ಸಿಬ್ಬಂದಿಗಳಾದ ಎಸ್. ಎಸ್ ಮಾವಿನಕಾಯಿ, ಯು.ಎಫ್ ಸುಣಗಾರ, ಕೆ.ಡಿ ಜಮಾದಾರ, ಅಂದಪ್ಪ ಹಣಜಗಿ, ಪ್ರವೀಣ ಕಲ್ಲೂರ, ಪಿ.ಎ. ಭರಮಗೌಡರ್ ಹಾಗೂ ವೀರಪ್ಪ ಗೌಡನಾಯ್ಕರ್ ಒಳಗೊಂಡ ತಂಡವನ್ನು ರಚಿಸಲಾಗಿತ್ತು.

ಈ ಎರಡೂ ಪ್ರಕರಣ ಭೇದಿಸಿದ ತಂಡಕ್ಕೆ ಎಸ್ಪಿ ಬಾಬಾಸಾಬ ನೇಮಗೌಡ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಆಟ-ಪಾಠದ ಜೊತೆಗೆ ಜೀವನದ ಪಾಠ ಇಂದಿನ ಅಗತ್ಯ-ಸಚಿವ ಲಾಡ್

# ಸಾಧನೆಯ ಕಡೆಗೆ ನಿಮ್ಮ ಗುರಿ ಇರಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಪದವಿ ಶಿಕ್ಷಣವು ವಿದ್ಯಾರ್ಥಿಗಳ ಭವಿಷ್ಯದಲ್ಲಿ ಉನ್ನತ ಅವಕಾಶಗಳಿಗೆ ರಹದಾರಿಯಾಗಿದೆ. ವಿದ್ಯಾರ್ಥಿಗಳ ಜೀವನದಲ್ಲಿ ಸಮಯ ಪ್ರಜ್ಞೆ ಮತ್ತು ಶಿಸ್ತು ಅವಶ್ಯಕ ಎಂದು ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ಸಂತೋಷ ಲಾಡ್ ಅವರು ಹೇಳಿದರು.

ಶನಿವಾರ ಬೆಳಿಗ್ಗೆ ನಗರದ ಪ್ರತಿಷ್ಠಿತ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಕಾಲೇಜಿನ 2022-23ನೇ ಶೈಕ್ಷಣಿಕ ಸಾಲಿನ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳ ಜೀವನದಲ್ಲಿ ಅಮೂಲ್ಯವಾದ ಶಿಕ್ಷಣವೆಂದರೆ ಅದು ಪದವಿ ಶಿಕ್ಷಣವಾಗಿರುತ್ತದೆ. ಕಲಿಕೆಯ ಜೊತೆಗೆ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವ ವಿಕಸನವನ್ನು ವೃದ್ಧಿಸಿಕೊಳ್ಳಲು ಕಾಲೇಜು ಶಿಕ್ಷಣದಲ್ಲಿ ಅನೇಕ ಅವಕಾಶಗಳಿವೆ. ಆಟ-ಪಾಠದ ಜೊತೆಗೆ ಜೀವನದ ಪಾಠವನ್ನು ಕಲಿಯಬೇಕಾಗಿರುವುದು ಇಂದು ಅಗತ್ಯವಾಗಿದೆ. ವಿದ್ಯಾರ್ಥಿ ದೆಸೆಯಲ್ಲಿ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಲು ಗುರುಹಿರಿಯರ ಮಾರ್ಗದರ್ಶನವನ್ನು ಪಡೆದು ಕೊಳ್ಳುವ ಮೂಲಕ ಉತ್ತಮ ಪ್ರಜೆಗಳಾಗಬೇಕು. ಮೊಬೈಲ್ ಬಳಕೆ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕೆ ಸರಿಯಾಗಿ ಬಳಕೆ ಮಾಡಿ. ಸಿಕ್ಕ ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳಿ ಎಂದು ಅವರು ವಿದ್ಯಾರ್ಥಿಗಳಿಗೆ ಹೇಳಿದರು. ಸತತ ಅಭ್ಯಾಸದಿಂದ ಮಾತ್ರ ಯಶಸ್ಸು ಸಾಧಿಸಲು ಸಾಧ್ಯ, ಸದೃಢ ದೇಶವನ್ನು ಕಟ್ಟಲು ವಿದ್ಯಾರ್ಥಿಗಳ ಪಾತ್ರ ಬಹು ದೊಡ್ಡದು. ನಿಮ್ಮ ಮುಂದಿನ ಭವಿಷ್ಯ ಉತ್ತಮವಾಗಿರಲಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ನಳಿನಿ ಬೆಂಗೇರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಡಾ. ಬಿ. ಎಸ್. ತಲ್ಲೂರ, ಶಿವಾನಂದ ನರಹಟ್ಟಿ, ವಿದ್ಯಾ ರಾಯ್ಕರ್, ಸಂಜೋತಾ ಶಿರಸಂಗಿ, ಡಾ.ದಯಾನಂದ ಲಾಳಸಂಗಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಡಾ.ಗಿರೀಶ ದೇಸೂರ ಕಾರ್ಯಕ್ರಮ ನಿರೂಪಿಸಿದರು, ಡಾ. ಬಸವರಾಜೇಶ್ವರಿ ಪಾಟೀಲ್ ಪ್ರಾಸ್ತವಿಕ ವಾರ್ಷಿಕ ವರದಿ ಮಂಡಿಸಿದರು , ಡಾ.ಜಿ.ಕೆ.ಬಡಿಗೇರ ಸ್ವಾಗತಿಸಿದರು, ಡಾ.ಅರುಣ ಕಲ್ಲೋಳಿಕರ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರತಿಭಾವಂತ ಎನ್. ಎಸ್.ಎಸ್ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ನೇಪಾಳದಲ್ಲಿ ಟೊಮೆಟೊ ಬೆಲೆ 10 ರೂ. ಭಾರತಕ್ಕೆ ರಫ್ತು ಮಾಡಲು ಸಿದ್ಧ

■ ವಿಜಯಸಾಕ್ಷಿ ಸುದ್ದಿ, ನೇಪಾಳ

ಒಂದೂವರೆ ತಿಂಗಳ ಹಿಂದೆ ಕಠ್ಮಂಡುವಿನಲ್ಲಿ ಟೊಮೆಟೊ ಕೆ.ಜಿಗೆ 10 ರೂ. ಬೆಲೆಯೂ ಇರಲಿಲ್ಲ. ಅಲ್ಲಿನ ರೈತರು ಸುಮಾರು 60,000 ರಿಂದ 70,000 ಕೆಜಿ ಟೊಮೆಟೊಗಳನ್ನು ರಸ್ತೆಗೆ ಸುರಿದಿದ್ದರು

ಭಾರತದಲ್ಲಿ ಟೊಮೆಟೊ ಬೆಲೆ ಗಗನಕ್ಕೇರಿದೆ. ಕೆ.ಜಿಗೆ 242 ರೂ. ವರೆಗೂ ಮಾರಾಟವಾಗುತ್ತಿದೆ. ದೇಶದಲ್ಲಿ ಬೇಡಿಕೆಗೆ ತಕ್ಕಷ್ಟು ಪೂರೈಕೆ ಇಲ್ಲದೆ, ದೇಶವು ಟೊಮೆಟೊ ಬಿಕ್ಕಟ್ಟು ಎದುರಿಸುತ್ತಿದೆ. ಹೀಗಾಗಿ, ಭಾರತಕ್ಕೆ ಟೊಮೆಟೊ ಪೂರೈಸಲು ನೇಪಾಳ ಸಿದ್ಧವಾಗಿದೆ. ಆದರೆ, ಮಾರುಕಟ್ಟೆ ಮತ್ತು ಇತರ ಅಗತ್ಯ ಸೌಲಭ್ಯಗಳಿಗೆ ಸುಲಭ ಪ್ರವೇಶವನ್ನು ಬಯಸುತ್ತಿದೆ. ಭಾರತ ಕೂಡ ನೇಪಾಳದಿಂದ ಟೊಮೆಟೊ ಆಮದು ಮಾಡಿಕೊಳ್ಳಲು ಮುಂದಾಗಿದೆ. ಈ ಬಗ್ಗೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂಸತ್‌ನಲ್ಲಿ ತಿಳಿಸಿದ್ದಾರೆ.

"ಈಗಾಗಲೇ ನೇಪಾಳದಿಂದ ಭಾರತಕ್ಕೆ ಟೊಮೆಟೊ ರಫ್ತಾಗುತ್ತಿದೆ. ಅದನ್ನು ಧೀರ್ಘಾವಧಿಗೆ ವಿಸ್ತರಿಸಲು ಮತ್ತು ಬೃಹತ್ ಪ್ರಮಾಣದಲ್ಲಿ ರಫ್ತು ಮಾಡಲು ನೇಪಾಳ ಇಚ್ಛಿಸಿದೆ. ಅದಕ್ಕಾಗಿ, ಭಾರತದ ಮಾರುಕಟ್ಟೆಗೆ ಸುಲಭವಾಗಿ ಪ್ರವೇಶಿಸಲು ಮತ್ತು ಇತರ ಸೌಲಭ್ಯಗಳನ್ನು ಒದಗಿಸಬೇಕೆಂದು ನೇಪಾಳ ಬೇಡಿಕೆ ಇಟ್ಟಿದೆ" ಎಂದು ಕೃಷಿ ಸಚಿವಾಲಯದ ವಕ್ತಾರ ಶಬ್ನಮ್ ಶಿವಕೋಟಿ ಹೇಳಿದ್ದಾರೆ.

"ನೇಪಾಳದ ಕಠ್ಮಂಡು ಕಣಿವೆಯ ಮೂರು ಜಿಲ್ಲೆಗಳಾದ ಕಠ್ಮಂಡು, ಲಲಿತ್‌ಪುರ್ ಮತ್ತು ಭಕ್ತಾಪುರದಲ್ಲಿ ಹೇರಳವಾಗಿ ಟೊಮೆಟೊ ಬೆಳೆಯಲಾಗುತ್ತದೆ. ಆ ಟೊಮೆಟೊಗಳಲ್ಲಿ ಬಹುಪಾಲನ್ನು ಭಾರತಕ್ಕೆ ರಫ್ತು ಮಾಡಲು ನೇಪಾಳ ಸಿದ್ಧವಾಗಿದೆ" ಎಂದು ಕಠ್ಮಂಡುವಿನ ತರಕಾರಿ ಮಾರುಕಟ್ಟೆ ಅಭಿವೃದ್ಧಿ ಮಂಡಳಿಯ ಉಪ ನಿರ್ದೇಶಕಿ ಬಿನಯಾ ಶ್ರೇಷ್ಠಾ ತಿಳಿಸಿದ್ದಾರೆ.

ಒಂದೂವರೆ ತಿಂಗಳ ಹಿಂದೆ, ನೇಪಾಳದ ರೈತರು ತಾವು ಬೆಳೆದ ಟೊಮೆಟೊಗಳಿಗೆ ಉತ್ತಮ ಬೆಲೆ ಸಿಗದೆ ಕಂಗಾಲಾಗಿದ್ದರು. ಕಠ್ಮಂಡುವಿನಲ್ಲಿ ಟೊಮೆಟೊ ಕೆ.ಜಿಗೆ 10 ರೂ. ಬೆಲೆಯೂ ಇರಲಿಲ್ಲ. ಬೆಲೆ ಇಳಿಕೆಯಿಂದಾಗಿ ಸುಮಾರು 60,000 ರಿಂದ 70,000 ಕೆಜಿ ಟೊಮೆಟೊಗಳನ್ನು ಕಠ್ಮಂಡುವಿನ ತರಕಾರಿ ಮಾರುಕಟ್ಟೆ ಬಳಿಯ ರಸ್ತೆಗಳಲ್ಲಿ ಸುರಿದಿದ್ದರು ಎಂದು ಹೇಳಲಾಗಿದೆ.

ಆ ನಂತರದಲ್ಲಿ, ನೇಪಾಳದ ಕೆಲವು ವ್ಯಾಪಾರಿಗಳು ಅಕ್ರಮ ಮಾರ್ಗಗಳ ಮೂಲಕ ಭಾರತಕ್ಕೆ ಟೊಮೆಟೊ ರಫ್ತು ಮಾಡಲು ಆರಂಭಿಸಿದ್ದರು. ಆ ಬಳಿಕ, ಕಠ್ಮಂಡುವಿನಲ್ಲಿ ಟೊಮೆಟೊ ಬೆಲೆ ನಾಲ್ಕು ಪಟ್ಟು ಹೆಚ್ಚಾಯಿತು ಎಂದು ಅಲ್ಲಿನ ಮಾರುಕಟ್ಟೆ ವಿಶ್ಲೇಷಕರು ಹೇಳಿದ್ದಾರೆ.

## ಭಾರತೀಯ ಸಂಸ್ಕೃತಿಯನ್ನು ಉಳಿಸುವ ಕೆಲಸವಾಗಲಿ




■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕೊನೆಯಾಗದಿರುವ ಸಂಸ್ಕೃತಿ ಎಂದರೆ ಜನಪದ. ನಾಡಿನ ಇತಿಹಾಸ ತಿಳಿಯಬೇಕಾದರೆ ವಿದ್ಯಾರ್ಥಿಗಳು ಪುಸ್ತಕಗಳನ್ನು ಓದಿ ಅಧ್ಯಯನಶೀಲರಾಗಬೇಕು. ಸಂಪತ್ತು ಶಾಶ್ವತವಲ್ಲ, ನಮಗೆ ವಿದ್ಯೆಯೇ ಶಾಶ್ವತ ಎಂದು ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಹೇಳಿದರು.

ಪಟ್ಟಣದ ಕ ರಾ ಬೆಲ್ಲದ ವಾಣಿಜ್ಯ ಮಹಾವಿದ್ಯಾಲಯ ಮತ್ತು ಅರ್ಥಶಾಸ್ತ್ರ ಸ್ನಾತಕೋತ್ತರ ಅಧ್ಯಯನ ವಿಭಾಗ, ಆಂತರಿಕ ಗುಣಮಟ್ಟ ಭರವಸೆ ಕೋಶ ಮತ್ತು ವಿದ್ಯಾರ್ಥಿಗಳ ಸಂಘದ ಆಶ್ರಯದಲ್ಲಿ ಶುಕ್ರವಾರ ಜರುಗಿದ ಸಂಸ್ಕೃತಿ 'ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಗಳ ಸೌರಭ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಾಡು, ದೇಶದ ವಿಷಯ ಬಂದಾಗ ಪ್ರಾಣ ಕೊಡುವ ವ್ಯಕ್ತಿತ್ವ ಹೊಂದಬೇಕು. ಜಗತ್ತಿಗೆ ಅನ್ನ ಕೊಡುವ ಶಕ್ತಿ ರೈತನಿಗಿದೆ. ಜನಪದ ಕಲೆ, ಸಂಸ್ಕೃತಿ ಉಳಿಸಿ-ಬೆಳೆಸುವ ಕೆಲಸ ಆಗಬೇಕು ಎಂದರು. ಜಗದ್ಗುರು ಅನ್ನದಾನೀಶ್ವರ ವಿದ್ಯಾ ಸಮಿತಿ ಆಡಳಿತಾಧಿಕಾರಿ ಡಾ. ಬಿ ಜಿ ಜವಳಿ ಮಾತನಾಡಿ, ಪ್ರತೀ ಹಂತದಲ್ಲಿ ಭಾರತೀಯ ಸಂಸ್ಕೃತಿಯನ್ನು ಉಳಿಸುವ ಕೆಲಸ ನಡೆಯಬೇಕು. ಭಾರತವು ವಿವಿಧತೆಯಲ್ಲಿ ಏಕತೆ ಹೊಂದಿದ್ದು, ಹಲವಾರು ಸಂಸ್ಕೃತಿಗಳಿವೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯ ಮೇಲ್ವಿಚಾರಣಾ ಸಮಿತಿಯ ಕಾರ್ಯಾಧ್ಯಕ್ಷ ಆರ್ ಎಲ್ ಪೊಲೀಸ್‌ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಪುಸ್ತಕಗಳೇ ನಿಮ್ಮ ಆಸ್ತಿ. ಪುಸ್ತಕಗಳು ಜಗತ್ತನ್ನು ಪರಿಚಯಿಸುವ ಕೆಲಸ ಮಾಡುತ್ತವೆ ಎಂದರು. ಎಂ ಎಸ್ ಶಿವಶೆಟ್ಟರ, ಡಾ. ಆರ್ ಎಚ್ ಜಂಗಣವಾರಿ, ಡಾ. ವನಜಾಕ್ಷಿ ಭರಮಗೌಡರ, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರಾಚಾರ್ಯ ಡಾ. ಡಿ ಸಿ ಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾರ್ಥಿಗಳಾದ ಸಂಗೀತ ಶೆಟ್ಟರ ಸ್ವಾಗತಿಸಿದರೆ, ತೇಜಸ್ವಿನಿ ಶಲವಡಿ ಹಾಗೂ ಸಚಿನ ಕಾರ್ಯಕ್ರಮ ನಿರೂಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಾಲೆಹೊಸೂರ ಕೆರೆ ಅಭಿವೃದ್ಧಿ ವೇದಿಕೆಯ ಅಧ್ಯಕ್ಷ ಬಸವರೆಡ್ಡಿ ಹನಮರೆಡ್ಡಿ ಆಗ್ರಹ

# ಗ್ರಾಮದ ಕೆರೆಗಳಿಗೆ ವರದೆಯ ನೀರು ಹರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಾಲೆಹೊಸೂರ ಗ್ರಾಮದ ಕೆರೆಗಳಿಗೆ ವರದಾ ನದಿಯಿಂದ ನೀರು ತುಂಬಿಸುವ 9.40 ಕೋಟಿ ರೂ ಯೋಜನೆ ಪೂರ್ಣಗೊಂಡು ವರ್ಷಗಳೇ ಕಳೆದರೂ, ಕೆರೆಗೆ ಹನಿ ನೀರೂ ಬರದೇ ಯೋಜನೆ ನೆನೆಗುದಿಗೆ ಬಿದ್ದಿದೆ. ಕೂಡಲೇ ಸಂಬಂಧಪಟ್ಟ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಕೆರೆಗಳಿಗೆ ನೀರು ಹರಿಸುವ ಕಾರ್ಯ ಪ್ರಾರಂಭಿಸದಿದ್ದರೆ ಉಪವಾಸ ಸತ್ಯಾಗ್ರಹ ಕೈಗೊಳ್ಳುವುದಾಗಿ ಬಾಲೆಹೊಸೂರ ಕೆರೆ ಅಭಿವೃದ್ಧಿ ವೇದಿಕೆಯ ಅಧ್ಯಕ್ಷ ಬಸವರೆಡ್ಡಿ ಹನಮರೆಡ್ಡಿ ಆಗ್ರಹಿಸಿದರು.

ಅವರು ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲೂಕಿನ ಕೊನೆಯ ಗ್ರಾಮವಾದ ಬಾಲೆಹೊಸೂರ ತುಂಗಭದ್ರಾ ನದಿಯಿಂದ ಕೇವಲ 10 ಕಿ.ಮೀ ಅಂತರಲ್ಲಿದ್ದರೂ ದೀಪದ ಕೆಳಗೆ ಕತ್ತಲು ಎಂಬಂತೆ ನೀರಿನ ಸಮಸ್ಯೆಗೆ ಪರಿಹಾರ ಸಿಗುತ್ತಿಲ್ಲ. ಶ್ರೀ ದಿಂಗಾಲೇಶ್ವರ ಶ್ರೀಗಳು ಗ್ರಾಮಸ್ಥರ ಪರವಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ, 2017ರ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ವರದಾ ನದಿಯಿಂದ ಗ್ರಾಮದ 3 ಕೆರೆಗಳಿಗೆ ನೀರು ತುಂಬಿಸುವ 9.40 ಕೋಟಿ ರೂ ಯೋಜನೆ ಜಾರಿಗೊಳಿಸಿತ್ತು. ಅದರೆ ಬಿಜೆಪಿ ಸರ್ಕಾರದ 5 ವರ್ಷದ ಆಡಳಿತದಲ್ಲಿ ಪೂರ್ಣಗೊಳಿಸಿದರೂ ಯೋಜನೆಯತ್ತ ಕಣ್ಣು ಹಾಯಿಸಲಿಲ್ಲ.




> 2021ರಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಅವರ ನೇತೃತ್ವದಲ್ಲಿ ಬಾಲೆಹೊಸೂರಿನಿಂದ ಲಕ್ಷ್ಮೇಶ್ವರವರೆಗೆ ಪಾದಯಾತ್ರೆ ಮಾಡಿ, ತಹಸೀಲ್ದಾರ ಕಚೇರಿ ಮುಂದೆ ಪ್ರತಿಭಟನೆಯಿಂದ ಗಮನ ಸೆಳೆದ ಬಳಿಕ ಕಾಮಗಾರಿ ಪೂರ್ಣಗೊಳಿಸಲಾಯಿತು. ಬಳಿಕ 2022ರಲ್ಲಿ ಪ್ರಾಯೋಗಿಕ ಪರೀಕ್ಷೆ ಮಾಡಿದ್ದರೂ ಇದುವರೆಗೂ ಕೆರೆಗೆ ಹನಿ ನೀರೂ ಬಂದಿಲ್ಲ. ಈ ಬಗ್ಗೆ ಕೇಳಿದರೆ ಒಬ್ಬರ ಮೇಲೊಬ್ಬರೂ ಬೊಟ್ಟು ಮಾಡಿ ತೋರಿಸುತ್ತಾ ಜಾರಿಕೊಳ್ಳುತ್ತಿದ್ದಾರೆ. ಇಂಜಿನಿಯರ್ ಮತ್ತು ಗುತ್ತಿಗೆದಾರರ ನಡುವಿನ ಮುಸುಕಿನ ಗುದ್ದಾಟದಿಂದ ಕೋಟ್ಯಾಂತರ ರೂ ಯೋಜನೆ ನೆನೆಗುದಿಗೆ ಬಿದ್ದಿದೆ.
>
> – ಬಸವರೆಡ್ಡಿ ಹನಮರೆಡ್ಡಿ.
> ಬಾಲೆಹೊಸೂರ ಕೆರೆ ಅಭಿವೃದ್ಧಿ ವೇದಿಕೆಯ ಅಧ್ಯಕ್ಷರು.

ಪ್ರಸಕ್ತ ಮುಂಗಾರಿನಲ್ಲಿ ಮಳೆಯಾಗದ್ದರಿಂದ ಕೆರೆಯಲ್ಲಿ ನೀರಿಲ್ಲ. ಕೆರೆ ನೀರು ತುಂಬಿದರೆ ಅಂತರ್ಜಲ ಮಟ್ಟ ಹೆಚ್ಚಿ ಬೋರ್‌ವೆಲ್ ನೀರಿನ ಮಟ್ಟ ಸಮತೋಲನ ಕಾಯುತ್ತದೆ. ಜನ-ಜಾನುವಾರು, ಪ್ರಾಣಿ-ಪಕ್ಷಿಗಳ ನೀರಿನ ಸಮಸ್ಯೆ ನಿವಾರಣೆಯಾಗುತ್ತದೆ. ಮುಖ್ಯವಾಗಿ ನದಿಯಲ್ಲಿ ನೀರು ಹರಿಯುವ ವೇಳೆ ಮಾತ್ರ ನದಿ ನೀರು ಎತ್ತುವಳಿಗೆ ಅವಕಾಶ ಇರುವುದರಿಂದ ಕೂಡಲೇ ಜಿಲ್ಲಾಧಿಕಾರಿಗಳು ಈ ಕೂಡಲೇ ನೀರು ಹರಿಸುವ ಕಾರ್ಯಕ್ಕೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಬೇಕು. ಇಷ್ಟಾಗಿಯೂ ಕೆರೆ ನೀರು ಹರಿಸುವ ಕಾರ್ಯ ಪ್ರಾರಂಭಗೊಳ್ಳದಿದ್ದರೆ ಆ.16ರಿಂದ ಬಾಲೆಹೊಸೂರ ಗ್ರಾಮದಲ್ಲಿ ಗ್ರಾಮಸ್ಥರೆಲ್ಲ ಸೇರಿ ರಸ್ತೆ ತಡೆದು, ಉಪವಾಸ ಸತ್ಯಾಗ್ರಹ ಕೈಗೊಳ್ಳುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ಕರಿಯಪ್ಪ ಸಾಂದ್ಲಿ, ಹನಮಂತಪ್ಪ ಸವಣೂರ, ರಾಜು ಬೆಂಚಳ್ಳಿ, ಜಗದೀಶ ಜೋಗೇರ, ಸದ್ದಾಂ ಹಾಲಗಿ, ನಿಂಗಪ್ಪ ಜಟ್ಟೆಣ್ಣವರ ಮುಂತಾದವರಿದ್ದರು.

## ಮಾಜಿ ಸಚಿವ ಎಸ್ ಎಸ್ ಪಾಟೀಲರ ಜನ್ಮದಿನಾಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಅರಣ್ಯ ಇಲಾಖೆ ಹಾಗೂ ಎಸ್ ಎಸ್ ಪಾಟೀಲ ಅಭಿಮಾನಿ ಬಳಗದ ಆಶ್ರಯದಲ್ಲಿ ಸಹಕಾರ ಹಾಗೂ ಅರಣ್ಯ ಇಲಾಖೆ ಮಾಜಿ ಸಚಿವ ಎಸ್ ಎಸ್ ಪಾಟೀಲ ಅವರ 89ನೇ ಜನ್ಮದಿನದ ಅಂಗವಾಗಿ 100 ಸಸಿಗಳ ದತ್ತಕ, ಬಿಂಕದಕಟ್ಟಿ ಮೃಗಾಲಯದ ಪಕ್ಷಿಗಳ ದತ್ತಕ ಸಮಾರಂಭ, ರೆಡ್ ಕ್ರಾಸ್ ಸಂಸ್ಥೆಗೆ 1ಲಕ್ಷ ರೂ ಶಾಶ್ವತ ಠೇವಣಿ ಯೋಜನೆ ಹಾಗೂ ಪರಿಸರ ಜಾಗೃತಿ ಕಾರ್ಯಕ್ರಮವನ್ನು ರವಿವಾರ ಬಿಂಕದಕಟ್ಟಿಯ ಸಾಲುಮರದ ತಿಮ್ಮಕ್ಕ ಉದ್ಯಾನ ಮತ್ತು ಪ್ರಾಣಿ ಸಂಗ್ರಹಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ. ಸಭಾಧ್ಯಕ್ಷ ಯು ಟಿ ಖಾದರ್ ಅಧ್ಯಕ್ಷತೆ ವಹಿಸಲಿದ್ದಾರೆ. ವಿ ಪ ಸಭಾಪತಿ ಬಸವರಾಜ್ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. 100 ಸಸಿಗಳ ದತ್ತಕ ಕಾರ್ಯಕ್ರಮದ ಉದ್ಘಾಟನೆಯನ್ನು ಸಚಿವ ಎಚ್ ಕೆ ಪಾಟೀಲ ನೆರವೇರಿಸುವರು. ಅರಣ್ಯ ಹಾಗೂ ಪರಿಸರ ಇಲಾಖೆ ಸಚಿವ ಈಶ್ವರ ಖಂಡ್ರೆ ಪರಿಸರ ಜಾಗೃತಿ ಕಾರ್ಯಕ್ರಮ ಉದ್ಘಾಟಿಸುವರು. ಗಣಿ ಮತ್ತು ಭೂ-ವಿಜ್ಞಾನ ಹಾಗೂ ತೋಟಗಾರಿಕೆ ಇಲಾಖೆ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಪಕ್ಷಿಗಳ ದತ್ತಕ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.



ಸಂಸದ ಶಿವಕುಮಾರ ಉದಾಸಿ, ಶಾಸಕರಾದ ಸಿ ಸಿ ಪಾಟೀಲ, ಜಿ ಎಸ್ ಪಾಟೀಲ, ಡಾ. ಚಂದ್ರು ಲಮಾಣಿ, ವಿ ಪ ಸದಸ್ಯರಾದ ಎಸ್ ವಿ ಸಂಕನೂರ, ಸಲೀಂ ಅಹ್ಮದ್, ಪ್ರದೀಪ್ ಶೆಟ್ಟರ್, ಮಾಜಿ ಶಾಸಕ ಡಿ ಆರ್ ಪಾಟೀಲ, ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್, ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಬಿ ಎಸ್ ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ದೀಪಿಕಾ ಬಾಜಪೈ, ಜಿ ಪಂ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ, ಪ್ರಭಾರ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ ಇವರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಅಭಿಮಾನಿ ಬಳಗದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲಿಂಗಾಯತ ಸಮುದಾಯಗಳನ್ನು ಒಬಿಸಿ ಪಟ್ಟಿಯಲ್ಲಿ ಸೇರಿಸಲು ಒತ್ತಾಯ: ಶೇಖರ ಸಜ್ಜನರ ಮಾಹಿತಿ

# ಸರ್ವ ಮಠಾಧೀಶರ ಸಮಾವೇಶ ನಾಳೆ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ ಎಚ್ ಪಾಟೀಲ ಸಭಾಭವನದಲ್ಲಿ ಆ.14ರಂದು ಬೆಳಿಗ್ಗೆ 11ಕ್ಕೆ ಸಮಸ್ತ ವೀರಶೈವ ಮಠಾಧೀಶರ ವೇದಿಕೆ ಮತ್ತು ವೀರಶೈವ ಲಿಂಗಾಯತ ಸಮನ್ವಯ ಸಮಿತಿ ವತಿಯಿಂದ ರಾಜ್ಯಾದ್ಯಂತ ಸಮುದಾಯದ ಒಳಪಂಗಡಗಳನ್ನು ಕೇಂದ್ರದ ಒಬಿಸಿ ಪಟ್ಟಿಯಲ್ಲಿ ಸೇರಿಸಲು ಆಗ್ರಹಿಸಿ ಕೇಂದ್ರ ಸರಕಾರಕ್ಕೆ ಹಕ್ಕೊತ್ತಾಯಿಸಲು ಎಲ್ಲ ಮಠಾಧೀಶರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ಆಯೋಗದ ನಿವೃತ್ತ ಅಧ್ಯಕ್ಷ ಶೇಖರ ಸಜ್ಜನರ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1990ರಲ್ಲಿ ಮಂಡಲ ಆಯೋಗದಲ್ಲಿ ಒಬಿಸಿ ಸೃಷ್ಟಿಸಲಾಯಿತು. ಅಂದು ವಿಪಿ ಸಿಂಗ್ ಅವರು ಶೇ.28ರಷ್ಟು ಒಬಿಸಿಗೆ ಮೀಸಲಾತಿ ನೀಡಿದ್ದರು. ದೇಶದಲ್ಲಿ 26,050 ಒಳಪಂಗಡ, ರಾಜ್ಯದಲ್ಲಿ 199 ಒಳಪಂಗಡಗಳು ಮೀಸಲಾತಿಯ ಲಾಭ ಪಡೆದಿವೆ. ಲಿಂಗಾಯತರಲ್ಲಿ 17 ಒಳಪಂಗಡಗಳು ಒಬಿಸಿಯಲ್ಲಿದ್ದು, ಎಲ್ಲ ಲಿಂಗಾಯತ ಒಳಪಂಗಡಗಳು ಒಬಿಸಿಯಲ್ಲಿ ಸ್ಥಾನ ಕೊಡಬೇಕು ಎಂದು ಆಗ್ರಹಿಸಿದರು.

ಕೇವಲ ರಾಜ್ಯದಲ್ಲಷ್ಟೇ ಅಲ್ಲದೆ, ದಕ್ಷಿಣ ಭಾರತದ ಎಲ್ಲ ರಾಜ್ಯಗಳಲ್ಲಿ ವೀರಶೈವ ಲಿಂಗಾಯತ ಪಂಗಡಗಳಿದ್ದು, ಈಗಾಗಲೇ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ. ಒಬಿಸಿ ಮೀಸಲಾತಿಯಿಂದ ಕೇಂದ್ರ ಸರ್ಕಾರದ ಉದ್ಯೋಗದಲ್ಲಿ ಅವಕಾಶ ಸಿಗುತ್ತದೆ. ಉದ್ಯೋಗದ ವಯಸ್ಸಿನ ಮಿತಿ ಸಡಿಲಿಸಲಾಗಿದೆ ಎಂದರು.

ವಿವಿಧ ಶಿಕ್ಷಣ ಸಂಸ್ಥೆಗಳಾದ ಐಐಎಂ, ಐಐಟಿ, ಐಐಎಸ್‌ಸಿ, ದಾಖಲಾತಿಗೆ ಶೇ.27 ಮೀಸಲಾತಿ ದೊರೆಯಲಿದೆ. ಕೇಂದ್ರ ಸರಕಾರದ ನವೋದಯ ವಸತಿ ವಿದ್ಯಾಲಯದಲ್ಲಿ ಶೇ.27 ಮೀಸಲಾತಿ ಇದ್ದು, 2020-21ರಲ್ಲಿ ಒಟ್ಟು 2,87,967 ವಿದ್ಯಾರ್ಥಿಗಳು 661 ನವೋದಯ ವಿದ್ಯಾಲಯಗಳಲ್ಲಿ ದಾಖಲಾತಿ ಪಡೆದರೆ, ಅದರಲ್ಲಿ 98,507 ಒಬಿಸಿ ವಿದ್ಯಾರ್ಥಿಗಳು ದಾಖಲಾಗಿದ್ದರು. ಕರ್ನಾಟಕದಲ್ಲಿ 7,973 ಒಬಿಸಿ ವಿದ್ಯಾರ್ಥಿಗಳು ದಾಖಲಾಗಿದ್ದರು ಎಂದರು.

6 ರಾಜ್ಯಗಳ 80 ಜಾತಿಗಳನ್ನು ಒಬಿಸಿ ಪಟ್ಟಿಗೆ ಸೇರಿಸಲು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗವು ಪರಿಶೀಲಿಸುತ್ತಿದೆ. ಅದರಲ್ಲಿ ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳು ಈಗಾಗಲೇ ಸಮಗ್ರ ವೀರಶೈವ ಲಿಂಗಾಯತರನ್ನು ಒಬಿಸಿ ವರ್ಗಕ್ಕೆ ಸೇರಿಸಬೇಕೆಂದು ಶಿಫಾರಸ್ಸು ಮಾಡಿವೆ. ಕರ್ನಾಟಕ ಸರಕಾರವೂ ಸಮಗ್ರ ವೀರಶೈವ ಲಿಂಗಾಯತರನ್ನು ಒಬಿಸಿ ವರ್ಗಕ್ಕೆ ಸೇರಿಸಲು ಶಿಫಾರಸ್ಸು ಮಾಡಲು ಈ ಮೂಲಕ ಹಕ್ಕೊತ್ತಾಯ ಮಾಡುತ್ತಿದ್ದೇವೆ ಎಂದರು.

ವಿ ಕೆ ಗುರುಮಠ, ಚಂದ್ರು ಬಾಳಿಹಳ್ಳಿಮಠ, ಈಶಣ್ಣ ಮುನವಳ್ಳಿ, ರಾಜಣ್ಣ ಮಲ್ಲಾಡದ, ಮಂಜುನಾಥ ಬೇಲೆರಿ, ಈರಣ್ಣ ಕರೀಬಿಷ್ಠಿ, ಕೆ ಕೆ ಮಳಗೌಡರ ಮುಂತಾದವರಿದ್ದರು.

> ನವೋದಯ, ನೀಟ್, ವೈದ್ಯಕೀಯ ಕಾಲೇಜ್‌ಗಳಲ್ಲಿ ಸಿಗುವ ಮೀಸಲು ಸಡಿಲಿಕೆಯಿಂದ ವೀರಶೈವ ಲಿಂಗಾಯತ ಸಮುದಾಯಕ್ಕೆ ಅನುಕೂಲ ಆಗಲಿದೆ. ಕೇಂದ್ರ ಸರಕಾರದ ಉದ್ಯೋಗ ಪಡೆದುಕೊಳ್ಳಲು ಪಡೆದ ಅಂಕಗಳ ಕಟ್‌ಆಫ್ ಸಡಿಲಿಕೆ, ಐಎಎಸ್ ಪರೀಕ್ಷೆಯಲ್ಲಿ ಸಾಮಾನ್ಯ ವರ್ಗದ 100ನೇ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳು ಆಯ್ಕೆಯಾಗುವವ ಸಾಧ್ಯತೆ ಇದೆ. ಕೇಂದ್ರ ಸರಕಾರದ ಉದ್ಯೋಗ ಪಡೆದುಕೊಳ್ಳಲು ವಯೋಮಿತಿ ಸಡಿಲಿಕೆ, ಸಾಮಾನ್ಯ ವರ್ಗಕ್ಕೆ 32 ವರ್ಷಗಳ ಮಿತಿ ಇದ್ದು, ಒಬಿಸಿ ವರ್ಗಕ್ಕೆ 35 ವರ್ಷದವರೆಗೆ ಅವಕಾಶ ಇದೆ.
>
> – ಶೇಖರ ಸಜ್ಜನರ.
> ಮಾಹಿತಿ ಆಯೋಗದ ನಿವೃತ್ತ ಅಧ್ಯಕ್ಷರು.

## ಶಾಸಕ ಚಂದ್ರು ಲಮಾಣಿಯವರ ಹೇಳಿಕೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಾಸಕ ಡಾ. ಚಂದ್ರು ಲಮಾಣಿ ಅವರ ಉತ್ತರ ಕರ್ನಾಟಕದ ಪತ್ಯೇಕತೆಯ ಹೇಳಿಕೆಯನ್ನು ಕರ್ನಾಟಕ ರಕ್ಷಣಾ ವೇದಿಕೆ(ನಾರಾಯನಗೌಡ ಬಣ)ಯ ಗದಗ ಜಿಲ್ಲಾಧ್ಯಕ್ಷ ಶರಣು ಗೋಡಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿಸುವ ಅವರು, ಅಖಂಡ ಕರ್ನಾಟಕ ಮತ್ತು ಕರ್ನಾಟಕ ಏಕೀಕರಣಕ್ಕಾಗಿ ಜಿಲ್ಲೆಯ ಅನೇಕ ಮಹನೀಯರು ತಮ್ಮನ್ನೇ ಸಮರ್ಪಿಸಿಕೊಂಡ ಹೆಮ್ಮೆಯಿದೆ. ಕನ್ನಡದ ಅನೇಕ ಖ್ಯಾತನಾಮ ಕವಿಗಳು, ಕಲಾವಿದರು ಜೀವಮಾನದುದ್ದಕ್ಕೂ ಈ ದಿಸೆಯಲ್ಲಿ ಶ್ರಮಿಸಿದ್ದಾರೆ. ಶಾಸಕರು ಅನೇಕ ಮಹನೀಯರ ತ್ಯಾಗ-ಬಲಿದಾನ, ಇತಿಹಾಸದ ಅರಿವಿಲ್ಲದೇ ಕೇವಲ ವೈಯಕ್ತಿಕ ಪ್ರಚಾರಕ್ಕಾಗಿ ಒಡಕಿನ ಮಾತುಗಳನ್ನು ಆಡಿದ್ದಾರೆ.



ಸಮಗ್ರ ಕರ್ನಾಟಕದ ಅಭಿವೃದ್ಧಿಯ ಚಿಂತನೆಯೊಂದಿಗೆ ಕ್ಷೇತ್ರದ ಅಭಿವೃದ್ಧಿಯ ಚಿಂತನೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಶಾಸಕರ ಧ್ವನಿಯಿದ್ದರೆ ಎಲ್ಲರ ಸಹಮತವಿರುತ್ತದೆ. ಹೊರತಾಗಿ, ರಾಜ್ಯವನ್ನು ಪ್ರತ್ಯೇಕಿಸುವ ವಿಚಾರ ಮಾತಾಡಿದರೆ ಶಾಸಕರ ಎಲ್ಲ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಕನ್ನಡಪರ ಸಂಘಟನೆಗಳಿಂದ ಕಪ್ಪು ಬಾವುಟ ಪ್ರದರ್ಶನ ಮಾಡಬೇಕಾಗುತ್ತದೆ. ಕೂಡಲೇ ತಮ್ಮ ಹೇಳಿಕೆಯನ್ನು ಹಿಂಪಡೆಯಿಸಿ ಎಂದು ಎಚ್ಚರಿಕೆ ನೀಡಿದ್ದಾರೆ.

## ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 10ನೇ ವಾರ್ಷಿಕೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ-ಕೋಡಿಕೊಪ್ಪ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 10ನೇ ವಾರ್ಷಿಕೋತ್ಸವ ಹಾಗೂ ಶಾಸಕರಿಗೆ ಸನ್ಮಾನ ಸಮಾರಂಭವು ರವಿವಾರ ಬೆಳಿಗ್ಗೆ 10ಕ್ಕೆ ಅಂಚೆ ಕಚೇರಿ ಬಳಿಯ ರೋಟರಿ ಭವನದಲ್ಲಿ ನಡೆಯಲಿದೆ.

ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಜಿ ಎ ಬೆಲ್ಲದ ವಹಿಸಲಿದ್ದು, ರೋಣ ಶಾಸಕ ಜಿ ಎಸ್ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಎಸ್ ಎ ಕಾಲೇಜು ನಿವೃತ್ತ ಪ್ರಾಧ್ಯಾಪಕ ಡಾ. ಎ ಕೆ ನಾಶಿ ಉಪನ್ಯಾಸ ನೀಡುವರು. ವಿ ಪ ಸದಸ್ಯ ಎಸ್ ವಿ ಸಂಕನೂರ, ಜಿಲ್ಲಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಈಶಣ್ಣ ಮುನವಳ್ಳಿ, ಸಮಾಜದ ಹಿರಿಯರಾದ ಸಿ ವಿ ವಂಕಲಕುಂಟಿ, ಸೂಡಿ ಗ್ರಾಮದ ವೀರಣ್ಣ ಶೆಟ್ಟರ, ರೋಣ ತಾಲೂಕಾ ಘಟಕಾಧ್ಯಕ್ಷ ಮುತ್ತಣ್ಣ ಸಂಗಳದ, ಗಜೇಂದ್ರಗಡ-ಉಣಚಗೇರಿ ಘಟಕದ ಅಧ್ಯಕ್ಷ ಎಸ್ ಎಸ್ ವಾಲಿ, ಗದಗ ತಾಲೂಕಾ ಘಟಕದ ಅಧ್ಯಕ್ಷ ನಾಗೇಶ ಸವಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಮಾರಂಭದಲ್ಲಿ ರೋಣ ಶಾಸಕ ಜಿ ಎಸ್ ಪಾಟೀಲರಿಗೆ, ನಿವೃತ್ತ ನೌಕರರಿಗೆ ಸನ್ಮಾನ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾವುದು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ತಿಳಿಸಿದ್ದಾರೆ.

## ಅನಧಿಕೃತ ಶಾಲೆಗಳನ್ನು ಮುಚ್ಚುವ ಆದೇಶ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಗಸ್ಟ್ 14ರೊಳಗೆ ಅನಧಿಕೃತ ಖಾಸಗಿ ಶಾಲೆಗಳನ್ನು ಮುಚ್ಚುವಂತೆ ಕರ್ನಾಟಕ ಸರ್ಕಾರ ಶುಕ್ರವಾರ ಆದೇಶಿಸಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಆದೇಶವನ್ನು ಮುಂದೂಡಿ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಖಾಸಗಿ ಶಾಲಾ ಆಡಳಿತ ಮಂಡಳಿಗಳ ಪ್ರತಿನಿಧಿಗಳನ್ನು ಭೇಟಿಯಾದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇಲಾಖೆಯು ರಾಜ್ಯಾದ್ಯಂತ ಸುಮಾರು 1,695 ಅನಧಿಕೃತ ಶಾಲೆಗಳನ್ನು ಗುರುತಿಸಿದೆ. ಅನೇಕ ಶಾಲೆಗಳು ರಾಜ್ಯ ಅಥವಾ ಕೇಂದ್ರ ಮಂಡಳಿಯೊಂದಿಗೆ ಮಾನ್ಯತೆ ಇಲ್ಲದೆ ಕಾನೂನುಬಾಹಿರವಾಗಿ ನಡೆಯುತ್ತಿವೆ. ಸುಮಾರು 620 ಶಾಲೆಗಳು ಇಲಾಖೆಯ ಅನುಮತಿಯಿಲ್ಲದೆ ಹೆಚ್ಚುವರಿ ವಿಭಾಗಗಳನ್ನು ಹೊಂದಿವೆ. ಇತರ ಶಾಲೆಗಳು ಮಾನ್ಯತೆಯಿಲ್ಲದೆ ತರಗತಿಗಳನ್ನು ಮೇಲ್ದರ್ಜೆಗೇರಿಸುವುದು, ರಾಜ್ಯ ಮಂಡಳಿಯ ಪಠ್ಯಕ್ರಮವನ್ನು ಮಾತ್ರ ನೀಡಲು ಅನುಮತಿ ಇದ್ದರೂ ಇತರ ಬೋರ್ಡ್ ಶಿಕ್ಷಣವನ್ನು ನೀಡುವುದು ಮತ್ತು ಕಾನೂನುಬಾಹಿರವಾಗಿ ಇಂಗ್ಲಿಷ್ ಮಾಧ್ಯಮವನ್ನು ನೀಡುವುದು ಮುಂತಾದ ಉಲ್ಲಂಘನೆಗಳನ್ನು ಹೊಂದಿವೆ ಎಂದಿದ್ದಾರೆ.

ಆದರೆ ಈ ಶಾಲೆಗಳು ಈಗಾಗಲೇ ವಿದ್ಯಾರ್ಥಿಗಳನ್ನು ದಾಖಲಿಸಿಕೊಂಡಿದ್ದು, ಆ ಶಾಲೆಗಳ ಮೇಲೆ ತಕ್ಷಣ ಕ್ರಮ ಕೈಗೊಂಡರೆ ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ, ಹಂತ ಹಂತವಾಗಿ ಕ್ರಮ ತೆಗೆದುಕೊಳ್ಳಲು ನಿರ್ಧರಿಸಿದ್ದೇವೆ ಎಂದು ಅವರು ತಿಳಿಸಿದರು. ಅನಧಿಕೃತ ಪಟ್ಟಿಯಲ್ಲಿರುವ ಶಾಲೆಗಳಿಗೆ ಸರಿಪಡಿಸಲು ಮತ್ತೊಂದು ಅವಕಾಶ ನೀಡಲಾಗುವುದು.

ಇನ್ನೂ ಸ್ವಲ್ಪ ಸಮಯ ನೀಡಿ, ಅನಧಿಕೃತ ಪಟ್ಟಿಯಿಂದ ಶಾಲೆಗಳ ಸಂಖ್ಯೆಯನ್ನು ಕಡಿಮೆ ಮಾಡುತ್ತೇವೆ ಎಂದರು.

ಕಲ್ಮೇಶ್ವರ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ.ಸಂಗಮೇಶ ಸಜ್ಜನರ ಅಭಿಪ್ರಾಯ

# 'ಹಳ್ಳಿಹಬ್ಬ'ದಿಂದ ವಿದ್ಯಾರ್ಥಿಗಳಲ್ಲಿ ಹೊಸ ಚೈತನ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಮೈದಾನದ ತುಂಬ ಇಳಕಲ್ ಸೀರೆಯುಟ್ಟು, ಗುಳೇದಗುಡ್ಡ ಕುಬಸ ತೊಟ್ಟು, ಬುತ್ತಿ ಗಂಟು ತಲೆಮೇಲೆ ಹೊತ್ತು ಹಳ್ಳಿಯ ಕಳೆಯನ್ನೇ ಸೃಷ್ಟಿಸಿದ ವಿದ್ಯಾರ್ಥಿನಿಯರು, ನಾವೇನು ಕಮ್ಮಿ ಎನ್ನುವಂತೆ ಧೋತುರ, ಜುಬ್ಬಾ, ಪೈಜಾಮ, ಟೋಪಿ ಪಟಗಾ ಹಾಕಿಕೊಂಡು ಎತ್ತುಗಳನ್ನು, ಕೊಲ್ಲಾರಿ ಬಂಡಿ, ಟ್ರ್ಯಾಕ್ಟರಗಳನ್ನು ಅಲಂಕರಿಸಿಕೊಂಡು ಬಂದ ವಿದ್ಯಾರ್ಥಿಗಳು, ಡೊಳ್ಳುಗಳ ಸದ್ದು ಮೈದಾನ ತುಂಬಿ ಹೊಸದೊಂದು ಲೋಕವನ್ನೇ ಸೃಷ್ಟಿಸಿದ್ದು ಇಲ್ಲಿನ ಶ್ರೀ ಕಲ್ಮೇಶ್ವರ ವಿದ್ಯಾಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತಕೋತ್ತರ ಅಧ್ಯಯನ ಕೇಂದ್ರದ ವತಿಯಿಂದ ಹಮ್ಮಿಕೊಂಡ ಹಳ್ಳಿ ಸೊಗಡಿನ 'ಹಳ್ಳಿಹಬ್ಬ' ಕಾರ್ಯಕ್ರಮದಲ್ಲಿ.



ಡೊಳ್ಳು ಬಾರಿಸುವ ಮೂಲಕ ಡಾ.ಸಂಗಮೇಶ ಸಜ್ಜನರ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ನಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಜೊತೆಗೆ ಕಾಲೇಜಿನ ಸಿಬ್ಬಂದಿಗಳೂ ಗ್ರಾಮೀಣ ವೇಷಭೂಷಣಗಳನ್ನು ತೊಟ್ಟು ಬಂದಿದ್ದು ನಿಜಕ್ಕೂ ಬಹಳಷ್ಟು ಖುಷಿ ತಂದಿದೆ. ಪ್ರತಿವರ್ಷವೂ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದು, ವಿದ್ಯಾರ್ಥಿಗಳಿಗೆ ಹೊಸ ಚೈತನ್ಯ ನೀಡುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಪ್ರಭು ಗಂಜಿಹಾಳ ಮಾತನಾಡಿ, ಮರೆಯಾಗುತ್ತಿರುವ ಗ್ರಾಮೀಣ ಕ್ರೀಡೆಗಳಾದ ಸಕ್ಕಸರಗಿ, ಕುಂಟೆಬಿಲ್ಲೆ, ಚಿನ್ನಿದಾಂಡು, ಲಗೋರಿ, ಗೋಲಿಗಜಗ, ಹಗ್ಗಜಗ್ಗಾಟ, ದುಬ್ಬಚಂಡು ಇತ್ಯಾದಿಗಳನ್ನು ಆಡುವ ಅವಕಾಶ ಕಲ್ಪಿಸುವ ಉದ್ದೇಶ ನಮ್ಮದು. ಈ ಹಬ್ಬ ಸಮಾನತೆ, ಸಹಬಾಳ್ವೆ, ಸಹಕಾರ, ಹೊಂದಾಣಿಕೆ, ಭ್ರಾತೃತ್ವದ ಮನೋಭಾವ ಮೂಡಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರೊ. ಎನ್.ಆರ್ ಹಿರೇಸಕ್ಕರಗೌಡರ, ಪ್ರಾಧ್ಯಾಪಕರಾದ ವಿಶ್ವನಾಥ ಪಾಟೀಲ, ಸಂತೋಷ ಮಾಳವಾಡ, ಮಲ್ಲಿಕಾರ್ಜುನ ಬೇವೂರ, ಎಸ್.ಬಿ ಹಳ್ಳೂರ, ಅಲ್ತಾಫ ನದಾಫ, ವಿನೋದ ಕಪ್ಪಲಿ, ಎಂ.ಟಿ ಆರೇರ, ವಿ.ಬಿ ಜಾಲಿಹಾಳ, ಎಸ್.ಆರ್ ನಾಯಕ, ಕೆ.ಎ ಕೊಪ್ಪದ, ಎಸ್.ಆಯ್ ಗಡಗಿ, ಜಿ.ಎಂ ಪೊಲೀಸಪಾಟೀಲ, ಶೇಖರಪ್ಪ ಮಾಳವಾಡ, ಎಸ್. ಆರ್ ಮುಂದಿನಮನಿ, ಆನಂದ ಕೆಂಚನಗೌಡ್ರ, ಅಶೋಕ ಹಡಪದ, ಬಾಳಪ್ಪ ಚಲವಾದಿ, ಎನ್‌ಎಸ್‌ಎಸ್ ಯೋಜನಾಧಿಕಾರಿ ಪ್ರೊ. ಎಸ್. ವಾಯ್ ಪೂಜಾರ, ಡಾ. ಕುಮಾರ ಹಂಜಗಿ, ಸಿಬ್ಬಂದಿವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಮೇಘಾ ಮಡಿವಾಳರ, ಅಕ್ಷತಾ ಮಣ್ಣೂರ ಪ್ರಾರ್ಥಿಸಿದರು. ಅಕ್ಷತಾ ಮಣ್ಣೂರ ಸ್ವಾಗತಿಸಿದರು.

ಮಧು ಗಾಣಿಗೇರ ನಿರೂಪಿಸಿದರು. ಸಾಂಸ್ಕೃತಿಕ ವಿಭಾಗದ ಕಾರ್ಯದರ್ಶಿ ರವಿಚಂದ್ರ ಕುರಿ ವಂದಿಸಿದರು. ವೇದಿಕೆಯಲ್ಲಿ ಪ್ರಧಾನ ಕಾರ್ಯದರ್ಶಿ ನಾಗರಾಜ ಹುಡೇದ, ಮಹಿಳಾ ಪ್ರತಿನಿಧಿ ಅನ್ನಪೂರ್ಣ ಪಾಟೀಲ ಉಪಸ್ಥಿತರಿದ್ದರು.

> ರೇಶ್ಮಾ ಟಕ್ಕೇದ, ಶಿಲ್ಪಾ ಮೆದನಪೂರ ಮತ್ತು ಜಯಶ್ರೀ ಪಾಟೀಲ ನಡೆಸಿಕೊಟ್ಟ ಕೇಶವಿನ್ಯಾಸ ಸ್ಪರ್ಧೆಯಲ್ಲಿ ಪ್ರಥಮಸ್ಥಾನ ಲಾವಣ್ಯ ಗಂಗೋಜಿ, ನಿಸರ್ಗ ಜಾಲಿಹಾಳ, ದ್ವಿತೀಯ ಸುಕನ್ಯಾ ಡುರೆ, ತೃತೀಯ ಬಹುಮಾನವನ್ನು ತಸ್ವಿಯಾ ಹಾಳಕೇರಿ ಪಡೆದರು. ಕ್ಯಾಟವಾಕ್ ಸ್ಪರ್ಧೆಯಲ್ಲಿ ಪ್ರಥಮ ನಿಸರ್ಗ ಜಾಲಿಹಾಳ, ದ್ವಿತೀಯ ತಸ್ವಿಯಾ ಹಾಳಕೇರಿ, ತೃತೀಯ ಶರಣಮ್ಮ ಪೂಜಾರ, ಪುರುಷರ ಕ್ಯಾಟವಾಕ್‌ನಲ್ಲಿ ಪ್ರಥಮ ಮಹೇಶ ಅಸೂಟಿ, ದ್ವಿತೀಯ ಶಿವಕುಮಾರ ಗಡಾದ, ತೃತೀಯ ರವಿಚಂದ್ರ ಕುರಿ, ಸಮಾಧಾನಕರ ರಾಕೇಶ ಕುರಿ ಪಡೆದುಕೊಂಡರು.

## ನಿಧನ ವಾರ್ತೆ

### ಗೌರಮ್ಮ ರಾಜಶೇಖರಗೌಡ ಸಂಕನಗೌಡ್ರ



**ನರೇಗಲ್ಲ:** ಪಟ್ಟಣದ ನಿವಾಸಿ ಗೌರಮ್ಮ ರಾಜಶೇಖರಗೌಡ ಸಂಕನಗೌಡ್ರ (90) ಇವರು ಶುಕ್ರವಾರ ನಿಧನರಾದರು.
ಮೃತರಿಗೆ ನಾಲ್ವರು ಪುತ್ರರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗದವರು ಇದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka